ಸಂಪುಟ: 11 ಸಂಚಿಕೆ: 165 ಪುಟ: 4+2 ಬೆಲೆ : 3.00 ಮಂಗಳವಾರ, ಆಗಸ್ಟ್ 04, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 165 Pages : 4+2 Rate : 3.00 Tuesday, August 04, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

### ನಾಳೆ ಡಿಸಿ ಕಚೇರಿ ಚಲೋ | ವಿವಿಧ ಬೇಡಿಕೆಗಳ ಈಡೇರಿಕೆಗೆ ಬೃಹತ್ ಪ್ರತಿಭಟನೆ

# ಅಧಿಕಾರಿಗಳ ದರ್ಪಕ್ಕೆ ರೈತರ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾಡಳಿತದ ಅಧಿಕಾರಶಾಹಿ ಧೋರಣೆ ಖಂಡಿಸಿ ಹಾಗೂ ರೈತರ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಆಗಸ್ಟ್ 5ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಧಿಕಾರಿ ಕಚೇರಿ ಎದುರು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ಸೇರಿದಂತೆ ವಿವಿಧ ಸಂಘಟನೆಗಳ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ರೈತ ಮುಖಂಡ ಬಸವರಾಜ ಸವಳಿ ಹೇಳಿದರು.




ಸೋಮವಾರ ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕೋಟುಮಚಗಿ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಬೆಳೆ ವೀಕ್ಷಣೆಗೆ ಬಂದ ಅಧಿಕಾರಿಗಳು ರೈತರೊಂದಿಗೆ ನಿರ್ಲಕ್ಷ್ಯವಾಗಿ ವರ್ತಿಸಿದ್ದು, ಕಾಟಾಚಾರಕ್ಕೆ ಬೆಳೆ ವೀಕ್ಷಣೆ ನಡೆಸಿದ್ದಾರೆ ಎಂದು ಆರೋಪಿಸಿದರು.

ಜುಲೈ 21ರಂದು ಬೆಳೆ ವಿಮೆ ಸಂಬಂಧ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲು ಹೋದ ವೇಳೆ ರೈತರೊಂದಿಗೆ ಅವಮಾನಕರವಾಗಿ ವರ್ತಿಸಿ ಪೊಲೀಸರನ್ನು ಕರೆಸುವ ಮೂಲಕ ಅಧಿಕಾರದ ದರ್ಪ ಪ್ರದರ್ಶಿಸಲಾಗಿದೆ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಅಧಿಕಾರಿಗಳು ಸರ್ವಾಧಿಕಾರಿಗಳಂತೆ ವರ್ತಿಸುವುದು ಖಂಡನೀಯ ಎಂದು ಆಕ್ರೋಶ ವ್ಯಕ್ತಪಡಿಸಿದರು.

2025-26ನೇ ಸಾಲಿನ ಬೆಳೆ ಹಾನಿಗೆ ಸಮರ್ಪಕ ಪರಿಹಾರ ನೀಡಬೇಕು, ಗದಗ ಜಿಲ್ಲೆಯನ್ನು ಬರಪೀಡಿತ ಜಿಲ್ಲೆ ಎಂದು ಘೋಷಿಸಬೇಕು, ರೈತರ ಸಾಲ ಸಂಪೂರ್ಣ ಮನ್ನಾ ಮಾಡಬೇಕು, ಬೆಳೆ ವಿಮೆ ಪರಿಹಾರವನ್ನು ತಕ್ಷಣ ಬಿಡುಗಡೆ ಮಾಡಬೇಕು ಹಾಗೂ ಕೃಷಿ ಪಂಪ್‌ಸೆಟ್‌ಗಳಿಗೆ ನಿರಂತರ ವಿದ್ಯುತ್ ಪೂರೈಕೆ ಕಲ್ಪಿಸಬೇಕು ಎಂದು ಆಗ್ರಹಿಸಿದರು.

ರೈತರ ಸಮಸ್ಯೆಗಳಿಗೆ ಸರ್ಕಾರ ಹಾಗೂ ಜಿಲ್ಲಾಡಳಿತ ಸ್ಪಂದಿಸದಿದ್ದರೆ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು. ನರಗುಂದ ಬಂಡಾಯದ ಮಾದರಿಯಲ್ಲೇ ಗದಗ ಜಿಲ್ಲೆಯಲ್ಲೂ ರೈತರ ಬೃಹತ್ ಹೋರಾಟಕ್ಕೆ ನಾಂದಿ ಹಾಡಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಸಂಗಮೇಶ ಪವಾಡಶೆಟ್ಟಿ, ವಿಜಯಕುಮಾರ ಸುಂಕದ, ಮುತ್ತನಗೌಡ ಚೌಡರಡ್ಡಿ, ವೀರಪ್ಪ ಕಾಳಗಿ, ಮುತ್ತಪ್ಪ ಜಗಲ್, ಯಲ್ಲಪ್ಪ ಗುರಿಕಾರ, ಗುರುಲಿಂಗಪ್ಪ ತಿಪ್ಪಶೆಟ್ಟಿ ಹಾಗೂ ಶರಣಪ್ಪ ಫಕ್ಕೀರಪ್ಪ ಉಪಸ್ಥಿತರಿದ್ದರು.

> ರೈತರನ್ನು ಅವಮಾನಿಸುವ ಅಧಿಕಾರಿಗಳ ದರ್ಪವನ್ನು ಸಹಿಸುವುದಿಲ್ಲ. ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಆಗಸ್ಟ್ 5ರ ಪ್ರತಿಭಟನೆ ನಿರ್ಣಾಯಕ ಹೋರಾಟವಾಗಲಿದೆ.
> **- ಬಸವರಾಜ ಸವಳಿ,** ರೈತ ಮುಖಂಡ

---

### ₹3.58 ಕೋಟಿ ವೆಚ್ಚದ ವಿದ್ಯಾರ್ಥಿನಿಯರ ವಸತಿ ನಿಲಯ ಉದ್ಘಾಟಿಸಿದ ಶಾಸಕ ಡಾ. ಚಂದ್ರು ಲಮಾಣಿ

## ಶಿಕ್ಷಣವೇ ಸಮಾಜ ಪರಿವರ್ತನೆಯ ಶಕ್ತಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಗ್ರಾಮೀಣ ಭಾಗದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳು ಶಿಕ್ಷಣದಿಂದ ವಂಚಿತರಾಗದಂತೆ ಸರ್ಕಾರ ವಿವಿಧ ಸೌಲಭ್ಯಗಳನ್ನು ಕಲ್ಪಿಸಿದ್ದು, ವಿದ್ಯಾರ್ಥಿಗಳು ಅವುಗಳನ್ನು ಸದ್ಬಳಕೆ ಮಾಡಿಕೊಂಡು ಉನ್ನತ ಸಾಧನೆ ಮಾಡಬೇಕು ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು. ಸೋಮವಾರ ಪಟ್ಟಣದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ₹3 ಕೋಟಿ 58 ಲಕ್ಷ ವೆಚ್ಚದಲ್ಲಿ ನಿರ್ಮಿಸಲಾದ ಡಾ. ಬಿ.ಆರ್. ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ನೂತನ ಕಟ್ಟಡವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಶಿಕ್ಷಣವು ಕೇವಲ ಪದವಿ ಪಡೆಯುವ ಸಾಧನವಲ್ಲ; ಉತ್ತಮ ವ್ಯಕ್ತಿತ್ವ, ಸಂಸ್ಕಾರ ಮತ್ತು ಸಾಮಾಜಿಕ ಹೊಣೆಗಾರಿಕೆಯನ್ನು ಬೆಳೆಸುವ ಶಕ್ತಿಯಾಗಿದೆ. ವಿದ್ಯಾರ್ಥಿನಿಯರು ವಸತಿ ನಿಲಯದ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಸಾಧನೆ ಮಾಡಿ ಕುಟುಂಬ ಹಾಗೂ ಸಮಾಜಕ್ಕೆ ಕೀರ್ತಿ ತರಬೇಕು ಎಂದು ಕರೆ ನೀಡಿದರು. ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ ಮಾತನಾಡಿ, ಸರ್ಕಾರವು ಹಿಂದುಳಿದ ಹಾಗೂ ಬಡ ವರ್ಗದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ವಸತಿ ನಿಲಯಗಳ ಮೂಲಕ ಉತ್ತೇಜನ ನೀಡುತ್ತಿದೆ. 100 ವಿದ್ಯಾರ್ಥಿನಿಯರಿಗೆ ಊಟ, ವಸತಿ ಸೇರಿದಂತೆ ಅಗತ್ಯ ಸೌಲಭ್ಯಗಳೊಂದಿಗೆ ಈ ನಿಲಯವನ್ನು ಇಲಾಖೆಯ ನಿಯಮಾನುಸಾರ ಭರ್ತಿ ಮಾಡಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ತಾಲೂಕು ಅಧಿಕಾರಿ ಗೋಪಾಲ ನಾಯಕ, ಬಿಜೆಪಿ ಮಂಡಲ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ, ಗ್ಯಾರಂಟಿ ಯೋಜನೆಗಳ ತಾಲೂಕು ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳ, ಮುತ್ತಣ್ಣ ಸಂಕನೂರ, ಎಂ.ಆರ್. ಪಾಟೀಲ, ಪ್ರವೀಣ ಬಾಳಿಕಾಯಿ, ಜಗದೀಶ ಪುರಾಣಿಕಮಠ ಸೇರಿದಂತೆ ವಿವಿಧ ಗಣ್ಯರು, ವಿದ್ಯಾರ್ಥಿನಿಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

---

### ಒಂದು ವಾರದಲ್ಲಿ ಪರಿಹಾರ ಸಿಗದಿದ್ದರೆ ರಾಜ್ಯ ಹೆದ್ದಾರಿ ತಡೆ; ಅಡರಕಟ್ಟಿ ರೈತರ ಎಚ್ಚರಿಕೆ

## ಚರಂಡಿ ನೀರಿಗೆ 160 ಎಕರೆ ಜಮೀನು ಬಲಿ!

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಲಕ್ಷ್ಮೇಶ್ವರ ಪಟ್ಟಣದ ಚರಂಡಿ ನೀರು ಅಡರಕಟ್ಟಿ ಹಾಗೂ ಮಂಜಲಾಪುರ ಗ್ರಾಮದ ರೈತರ ಜಮೀನುಗಳಿಗೆ ನುಗ್ಗಿ ಸುಮಾರು 160 ಎಕರೆ ಫಲವತ್ತಾದ ಕೃಷಿ ಭೂಮಿ ಹಲವು ವರ್ಷಗಳಿಂದ ಪಾಳು ಬೀಳುತ್ತಿದ್ದು, ಸಮಸ್ಯೆ ಪರಿಹರಿಸದಿದ್ದರೆ ಒಂದು ವಾರದ ಬಳಿಕ ಪಾಳಾಬದಾಮಿ ರಾಜ್ಯ ಹೆದ್ದಾರಿ ತಡೆ ನಡೆಸುವುದಾಗಿ ರೈತರು ಎಚ್ಚರಿಕೆ ನೀಡಿದ್ದಾರೆ.



ಸೋಮವಾರ ಪುರಸಭೆಗೆ ಮನವಿ ಸಲ್ಲಿಸಿದ ರೈತರು, ಕಳೆದ ಹಲವು ವರ್ಷಗಳಿಂದ ಪಟ್ಟಣದ ಚರಂಡಿ ನೀರು ಲಂಡಿಹಳ್ಳದ ಮೂಲಕ ಹರಿದು ಹೊಲಗಳಿಗೆ ಸೇರುತ್ತಿದ್ದು, ಜಮೀನಿನಲ್ಲಿ ಆಳೆತ್ತರದ ಜವುಳು ಮತ್ತು ಕಸ ಬೆಳೆದು ಕೃಷಿ ಮಾಡಲು ಸಾಧ್ಯವಾಗುತ್ತಿಲ್ಲ ಎಂದು ಅಳಲು ತೋಡಿಕೊಂಡರು.

ರೈತ ಮುಖಂಡ ಮಂಜುನಾಥ ಮಾಗಡಿ, ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ನಿಂಗಪ್ಪ ಪ್ಯಾಟಿ ಹಾಗೂ ಮುತ್ತಣ್ಣ ಗಡೆಪ್ಪನವರ ಮಾತನಾಡಿ, ಕಳೆದ ತಿಂಗಳು ಹಿಂದೆ ಮನವಿ ಸಲ್ಲಿಸಿದಾಗ ಒಂದು ವಾರದಲ್ಲಿ ಅಧಿಕಾರಿಗಳ ಸಭೆ ಕರೆದು ಸಮಸ್ಯೆ ಬಗೆಹರಿಸುವ ಭರವಸೆ ನೀಡಲಾಗಿತ್ತು. ಆದರೆ 15 ದಿನ ಕಳೆದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ಸಾಕ್ಷಿಯಾಗಿದೆ ಎಂದು ಆರೋಪಿಸಿದರು. ಮತ್ತೊಮ್ಮೆ ಮನವಿ ಸಲ್ಲಿಸಲಾಗಿದ್ದು, ಒಂದು ವಾರದೊಳಗೆ ರೈತರು ಹಾಗೂ ಸಂಬಂಧಿತ ಅಧಿಕಾರಿಗಳ ಸಭೆ ಕರೆದು ಶಾಶ್ವತ ಪರಿಹಾರ ಕಲ್ಪಿಸದಿದ್ದರೆ ಸಮಗ್ರ ರೈತರು ಸೇರಿ ಲಕ್ಷ್ಮೇಶ್ವರ ಮೂಲಕ ಹಾದು ಹೋಗುವ ಪಾಳಾಬದಾಮಿ ರಾಜ್ಯ ಹೆದ್ದಾರಿಯನ್ನು ತಡೆದು ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಪುರಸಭೆ ವ್ಯವಸ್ಥಾಪಕಿ ಮಂಜುಳಾ ಹೂಗಾರ ಅವರಿಗೆ ರೈತರು ಮನವಿ ಸಲ್ಲಿಸಿದರು. ರೈತ ಮುಖಂಡರಾದ ಸಿದ್ದಣ್ಣ ಹವಳದ, ಯಲ್ಲಪ್ಪ ಗಡೆಪ್ಪನವರ, ಸಿದ್ದು ಚಿಕ್ಕಣ್ಣವರ, ಲೋಹಿತ ಹಳೆಮನಿ, ಮಾಂತೇಶ ಲಿಂಗಶೆಟ್ಟಿ, ಮೌನೇಶ ಗಡೆಪ್ಪನವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

> ಹಲವು ವರ್ಷಗಳಿಂದ ಫಲವತ್ತಾದ ಭೂಮಿ ಚರಂಡಿ ನೀರಿನಿಂದ ಹಾಳಾಗುತ್ತಿದೆ. ಇನ್ನೂ ನಿರ್ಲಕ್ಷ್ಯ ಮುಂದುವರಿದರೆ ರೈತರು ರಸ್ತೆಗಿಳಿದು ಹೋರಾಟ ನಡೆಸುವುದು ಅನಿವಾರ್ಯ.
> **- ಮಂಜುನಾಥ ಮಾಗಡಿ,** ರೈತ ಮುಖಂಡ

---

### ಜಕ್ಕಲಿ ಮಾರ್ಗವಾಗಿ ರೋಣ-ಬೆಂಗಳೂರು ಬಸ್ ಸಂಚಾರ ಪುನರಾರಂಭ




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸಮೀಪದ ಜಕ್ಕಲಿ ಗ್ರಾಮ ಮಾರ್ಗವಾಗಿ ರೋಣಬೆಂಗಳೂರು ಬಸ್ ಸೇವೆ ಸೋಮವಾರದಿಂದ ಪುನರಾರಂಭಗೊಂಡಿದ್ದು, ಹಲವು ವರ್ಷಗಳ ಸಾರ್ವಜನಿಕರ ಹೋರಾಟಕ್ಕೆ ಕೊನೆಗೂ ಯಶಸ್ಸು ದೊರೆತಿದೆ. ಬಸ್ ಗ್ರಾಮಕ್ಕೆ ಆಗಮಿಸುತ್ತಿದ್ದಂತೆ ಗ್ರಾಮಸ್ಥರು ವಿಶೇಷ ಪೂಜೆ ಸಲ್ಲಿಸಿ, ಚಾಲಕ ಹಾಗೂ ನಿರ್ವಾಹಕರಿಗೆ ಮಾಲಾರ್ಪಣೆ ಮಾಡಿ ಆತ್ಮೀಯವಾಗಿ ಸ್ವಾಗತಿಸಿದರು.

ಕೋವಿಡ್-19 ಅವಧಿಯಲ್ಲಿ ಸ್ಥಗಿತಗೊಂಡಿದ್ದ ಈ ಬಸ್ ಸೇವೆಯಿಂದ ಜಕ್ಕಲಿ, ನರೇಗಲ್ಲ ಹಾಗೂ ಸುತ್ತಮುತ್ತಲಿನ ಗ್ರಾಮಗಳ ಜನರು ಬೆಂಗಳೂರಿಗೆ ತೆರಳಲು ಗದಗ, ಹಾವೇರಿ ಅಥವಾ ಹುಬ್ಬಳ್ಳಿಗೆ ತೆರಳಿ ಬಸ್ ಹತ್ತಬೇಕಾದ ಅನಿವಾರ್ಯತೆ ಎದುರಾಗಿತ್ತು.

ಬಸ್ ಸೇವೆ ಪುನರಾರಂಭಕ್ಕೆ ಆಗ್ರಹಿಸಿ ಜಕ್ಕಲಿ ಬಸ್ ಹೋರಾಟಗಾರರ ಸಮಿತಿ ಹಲವು ಬಾರಿ ರೋಣ ಸಾರಿಗೆ ಘಟಕದ ವ್ಯವಸ್ಥಾಪಕರಿಗೆ ಮನವಿ ಸಲ್ಲಿಸಿತ್ತು. ಇತ್ತೀಚೆಗೆ ಜಿಲ್ಲೆಯ ಜನಪ್ರತಿನಿಧಿಗಳ ಮಧ್ಯಪ್ರವೇಶದ ಬಳಿಕ ಕೆಎಸ್ ಆರ್‌ಟಿಸಿ ಅಧಿಕಾರಿಗಳು ಬಸ್ ಸೇವೆ ಪುನರಾರಂಭಿಸಲು ಒಪ್ಪಿಗೆ ನೀಡಿದರು.

ಬಸ್ ಆಗಮಿಸಿದ ವೇಳೆ ಗ್ರಾಮಸ್ಥರು ತೆಂಗಿನಕಾಯಿ ಒಡೆದು, ಆರತಿ ಬೆಳಗಿ ಪೂಜೆ ಸಲ್ಲಿಸಿದರು. ಬಳಿಕ ಚಾಲಕ ಮತ್ತು ನಿರ್ವಾಹಕರಿಗೆ ಮಾಲಾರ್ಪಣೆ ಮಾಡಿ ಸಿಹಿ ಹಂಚಿ ಸಂಭ್ರಮಿಸಿದರು. ಬಸ್ ಸೇವೆ ಪುನರಾರಂಭಗೊಂಡಿರುವುದರಿಂದ ವಿದ್ಯಾರ್ಥಿಗಳು, ಉದ್ಯೋಗಿಗಳು, ವ್ಯಾಪಾರಸ್ಥರು ಹಾಗೂ ಬೆಂಗಳೂರಿಗೆ ತೆರಳುವ ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದು ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ವೀರಭದ್ರಪ್ಪ ಗಾಣಿಗೇರ, ಅನಿಲಕುಮಾರ ಹೊಸಮನಿ, ವಿನಾಯಕ ಉಮತಾರ, ಅನಿಲಕುಮಾರ ತಳವಾರ, ಮಂಜುನಾಥ ವಾಲಿ, ಜಗದೀಶ ಪಲ್ಲೇದ, ಸಂತೋಷ ಕೋರಿ, ಮಲ್ಲಪ್ಪ ಪಲ್ಲೇದ, ಪ್ರಕಾಶ ವಾಲಿ, ಎಸ್.ಕೆ. ತಮ್ಮಿನಾಳ, ರಮೇಶ ತಳವಾರ, ವೀರೇಶ ಪಟ್ಟಣಶೆಟ್ಟಿ, ಮಂಜುನಾಥ ಪಲ್ಲೇದ, ಗೌಸುಸಾಬ ನಮಾಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

---

### ಠಾಣೆಯಲ್ಲಿ ಯುವಕನ ಸಾವಿನ ಪ್ರಕರಣ

## ನ್ಯಾಯಾಂಗ ತನಿಖೆಗೆ ಆಗ್ರಹ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ನಡೆದ ಖಲೀಲುಲ್ಲಾ ಸಾವಿನ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ವಹಿಸಿ, ಮೃತರ ಕುಟುಂಬಕ್ಕೆ ₹50 ಲಕ್ಷ ಪರಿಹಾರ ನೀಡಬೇಕು ಎಂದು ಸಿಪಿಐ(ಎಂ) ಹಾಗೂ ಸಿಐಟಿಯು ಮುಖಂಡರು ಆಗ್ರಹಿಸಿದರು. ಪಟ್ಟಣದ ಬಸವೇಶ್ವರ ವೃತ್ತದಲ್ಲಿ ಪ್ರತಿಭಟನೆ ನಡೆಸಿದ ಬಳಿಕ ಉಪತಹಶೀಲ್ದಾರ್ ಕೆ. ಶಿವಕುಮಾರ ಗೌಡ ಅವರಿಗೆ ತಹಶೀಲ್ದಾರ್ ಮೂಲಕ ಗೃಹ ಸಚಿವರಿಗೆ ಮನವಿ ಸಲ್ಲಿಸಿ ಮಾತನಾಡಿದ ಸಿಐಟಿಯು ಮುಖಂಡ ಆರ್.ಎಸ್. ಬಸವರಾಜ್, ವಿಜಯನಗರ ಜಿಲ್ಲೆಯ ಇತಿಹಾಸದಲ್ಲೇ ಮೊದಲ ಬಾರಿಗೆ ಪೊಲೀಸ್ ಠಾಣೆಯಲ್ಲಿ ಲಾಕಪ್ ಸಾವು ಸಂಭವಿಸಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇದರಿಂದ ಸಾರ್ವಜನಿಕರಲ್ಲಿ ಪೊಲೀಸ್ ಇಲಾಖೆಯ ಮೇಲಿನ ವಿಶ್ವಾಸ ಕುಸಿದಿದ್ದು, ಅನ್ಯಾಯವಾದಾಗ ಠಾಣೆಗೆ ಹೋಗುವುದಕ್ಕೂ ಜನರು ಭಯಪಡುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು. ಸಿಪಿಐ(ಎಂ) ಮುಖಂಡ ಜಗನ್ನಾಥ್ ಮಾತನಾಡಿ, ಠಾಣೆಗೆ ಕರೆತರಲಾಗಿದ್ದ ಮೆಹಬೂಬ್ ನಗರದ ಕಟ್ಟಡ ಕಾರ್ಮಿಕ ಖಲೀಲುಲ್ಲಾ ಮೇಲೆ ಹಲ್ಲೆ ನಡೆಸಿದ ಪರಿಣಾಮವೇ ಅವರು ಮೃತಪಟ್ಟಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಆದ್ದರಿಂದ ಪ್ರಕರಣವನ್ನು ನ್ಯಾಯಾಂಗ ತನಿಖೆಗೆ ಒಳಪಡಿಸಿ ಸತ್ಯಾಂಶ ಹೊರತರಬೇಕು ಎಂದು ಒತ್ತಾಯಿಸಿದರು. ಸಿಪಿಐ(ಎಂ) ತಾಲೂಕು ಕಾರ್ಯದರ್ಶಿ ಬಿ. ಮಾಳಮ್ಮ ಮಾತನಾಡಿದರು.ಪ್ರತಿಭಟನೆಯಲ್ಲಿ ಕೆ. ರಮೇಶ್, ಸರ್ದಾರ್ ಹುಲಿಗೆಮ್ಮ, ಕೆ. ಗಾಳೆಪ್ಪ, ಕೆ. ಬಸವರಾಜ, ರಂಗಪ್ಪ ದಾಸರ, ಪಿ. ಚಾಂದ್ ಸೇರಿದಂತೆ ಹಲವರು ಭಾಗವಹಿಸಿದ್ದರು.

---

### ಜಲಕ್ಷಾಮ ಎದುರಿಸಲು ಜಿಲ್ಲಾಡಳಿತ, ನೀರಾವರಿ ಇಲಾಖೆ ತಕ್ಷಣ ಕ್ರಮಕ್ಕೆ ಆಗ್ರಹ

## ಎಲ್ಲಾ ಕೆರೆಗಳಿಗೆ ನೀರು ತುಂಬಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ಮುಂಗಾರು ಮಳೆ ಕೈಕೊಟ್ಟಿರುವ ಹಿನ್ನೆಲೆಯಲ್ಲಿ ಜಲಕ್ಷಾಮದ ಆತಂಕ ಎದುರಾಗಿದ್ದು, ಗದಗ ನಗರದ ಭೀಷ್ಮ ಕೆರೆ ಸೇರಿದಂತೆ ಜಿಲ್ಲೆಯ ಎಲ್ಲ ಕೆರೆಗಳನ್ನು ಮಲಪ್ರಭಾ ಹಾಗೂ ತುಂಗಭದ್ರಾ ನದಿಯ ನೀರಿನಿಂದ ಭರ್ತಿ ಮಾಡಲು ಜಿಲ್ಲಾಡಳಿತ, ನಗರಸಭೆ ಹಾಗೂ ನೀರಾವರಿ ಇಲಾಖೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ಗದಗ ಜಿಲ್ಲಾ ವಿಕಾಸ ವೇದಿಕೆ ಅಧ್ಯಕ್ಷ ವಿಶ್ವನಾಥ ಖಾನಾಪೂರ ಆಗ್ರಹಿಸಿದ್ದಾರೆ.



ಸೋಮವಾರ ಬಿಡುಗಡೆ ಮಾಡಿದ ಪ್ರಕಟಣೆಯಲ್ಲಿ ಅವರು, ಜಿಲ್ಲೆಯಲ್ಲಿರುವ 32 ಕೆರೆಗಳಿಗೆ ನೀರು ತುಂಬಿಸಿದರೆ ರೈತರ ಕೃಷಿ ಚಟುವಟಿಕೆಗಳಿಗೆ ನೆರವಾಗುವುದರ ಜೊತೆಗೆ ಕುಡಿಯುವ ನೀರಿನ ಸಮಸ್ಯೆಯೂ ಬಹುತೇಕ ನಿವಾರಣೆಯಾಗಲಿದೆ ಎಂದು ತಿಳಿಸಿದ್ದಾರೆ.

ಗದಗ ನಗರದ ಮಧ್ಯಭಾಗದಲ್ಲಿರುವ ಭೀಷ್ಮ ಕೆರೆಯಲ್ಲಿ ನೀರಿನ ಮಟ್ಟ ತೀವ್ರವಾಗಿ ಕುಸಿದಿದ್ದು, ಅದನ್ನು ಕೂಡಲೇ ತುಂಬಿಸಬೇಕು. ಇದರಿಂದ ಅಂತರ್ಜಲ ಮಟ್ಟ ಹೆಚ್ಚಾಗಿ ಕೊಳವೆಬಾವಿ ಹಾಗೂ ಬಾವಿಗಳಲ್ಲಿ ನೀರಿನ ಸಂಗ್ರಹ ವೃದ್ಧಿಯಾಗಲಿದ್ದು, ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಕನಿಷ್ಠ ಆರು ತಿಂಗಳವರೆಗೆ ನೀರಿನ ಸಮಸ್ಯೆ ತಪ್ಪಲಿದೆ ಎಂದು ಹೇಳಿದ್ದಾರೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಅವರು ರಾಜ್ಯದ ಎಲ್ಲಾ ಕೆರೆಗಳನ್ನು ತುಂಬಿಸುವ ಕುರಿತು ಈಗಾಗಲೇ ಸೂಚನೆ ನೀಡಿರುವ ಹಿನ್ನೆಲೆಯಲ್ಲಿ, ಜಿಲ್ಲೆಯ ಜನಪ್ರತಿನಿಧಿಗಳು ಈ ಯೋಜನೆಯನ್ನು ಗದಗ ಜಿಲ್ಲೆಯಲ್ಲಿ ತ್ವರಿತವಾಗಿ ಅನುಷ್ಠಾನಗೊಳಿಸುವಂತೆ ಸರ್ಕಾರದ ಮೇಲೆ ಒತ್ತಡ ಹೇರಬೇಕು ಎಂದು ಮನವಿ ಮಾಡಿದ್ದಾರೆ.

> ಜಿಲ್ಲೆಯ ಎಲ್ಲ ಕೆರೆಗಳನ್ನು ತುಂಬಿಸಿದರೆ ರೈತರಿಗೆ ನೀರಾವರಿ ಸೌಲಭ್ಯ ಹೆಚ್ಚುವುದರ ಜೊತೆಗೆ ಕುಡಿಯುವ ನೀರಿನ ಸಮಸ್ಯೆಯೂ ಗಣನೀಯವಾಗಿ ಕಡಿಮೆಯಾಗಲಿದೆ.
> **- ವಿಶ್ವನಾಥ ಖಾನಾಪೂರ,** ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

---

### ಡಾ. ಬಿ.ಎಫ್. ದಂಡಿನ ಸ್ಮಾರಕ ಭವನಕ್ಕೆ ನಾಳೆ ಭೂಮಿಪೂಜೆ



**ವಿಜಯಸಾಕ್ಷಿ ಸುದ್ದಿ, ಗದಗ**

ಕನಕದಾಸ ಶಿಕ್ಷಣ ಸಮಿತಿ ಹಾಗೂ ಡಾ. ಬಿ.ಎಫ್. ದಂಡಿನ ವಿದ್ಯಾರ್ಥಿ ಬಳಗದ ಆಶ್ರಯದಲ್ಲಿ ಅಗಲಿದ ಶಿಕ್ಷಣ ತಜ್ಞ ಡಾ. ಬಿ.ಎಫ್. ದಂಡಿನ ಹಾಗೂ ಶಕುಂತಲಾಬಾಯಿ ದಂಡಿನ ಅವರ ಸ್ಮರಣಾರ್ಥ ಸಾರ್ವಜನಿಕ ನುಡಿನಮನ ಸಭೆ ಹಾಗೂ ಸ್ಮಾರಕ ಭವನದ ಭೂಮಿಪೂಜೆ ಕಾರ್ಯಕ್ರಮ ಆಗಸ್ಟ್ 5ರಂದು ಬೆಳಿಗ್ಗೆ 10.30ಕ್ಕೆ ನಗರದ ಗಾಣಿಗ ಭವನದಲ್ಲಿ ನಡೆಯಲಿದೆ ಎಂದು ಸಮಿತಿ ಪದಾಧಿಕಾರಿಗಳು ತಿಳಿಸಿದರು.

ಸೋಮವಾರ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಎಂ.ಎನ್. ಕಾಮನಹಳ್ಳಿ, ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಕಾಗಿನೆಲೆ ಮಹಾಸಂಸ್ಥಾನದ ನಿರಂಜನಾನಂದ ಪುರಿ ಮಹಾಸ್ವಾಮಿಗಳು ಸೇರಿದಂತೆ ವಿವಿಧ ಮಠಾಧೀಶರು ವಹಿಸಲಿದ್ದು, ಹಲವು ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು.

ಡಾ. ಡಿ.ಬಿ. ಗವಾನಿ ಮಾತನಾಡಿ, ಡಾ. ಬಿ.ಎಫ್. ದಂಡಿನ ಅವರು ಗ್ರಾಮೀಣ ಭಾಗದ ಸಾವಿರಾರು ವಿದ್ಯಾರ್ಥಿಗಳಿಗೆ ಶಿಕ್ಷಣದ ಬೆಳಕು ನೀಡಿದ ಮಹನೀಯರು. ಅವರ ಸೇವೆಯನ್ನು ಚಿರಸ್ಥಾಯಿಗೊಳಿಸುವ ಉದ್ದೇಶದಿಂದ ಸ್ಮಾರಕ ಭವನ ನಿರ್ಮಿಸಲಾಗುತ್ತಿದೆ ಎಂದು ಹೇಳಿದರು. ಹಾಲುಮತ ಮಹಾಸಭಾ ರಾಜ್ಯಾಧ್ಯಕ್ಷ ರುದ್ರಣ್ಣ ಗುಳಗುಳಿ ಮಾತನಾಡಿ, ಶಿಕ್ಷಕರಾಗಿ ಆರಂಭಿಸಿದ ಡಾ. ದಂಡಿನ ಅವರು 65ಕ್ಕೂ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಸ್ಥಾಪಿಸಿ ಶಿಕ್ಷಣ ಕ್ಷೇತ್ರಕ್ಕೆ ಅನನ್ಯ ಕೊಡುಗೆ ನೀಡಿದ್ದಾರೆ. ಜೀವನದ ಕೊನೆಯ ಕ್ಷಣದವರೆಗೂ ಶಿಕ್ಷಣ ಸೇವೆಯನ್ನೇ ಧ್ಯೇಯವಾಗಿಸಿಕೊಂಡು ಬದುಕಿದ ಅವರ ಆದರ್ಶ ಸಮಾಜಕ್ಕೆ ಮಾದರಿಯಾಗಿದೆ ಎಂದು ಸ್ಮರಿಸಿದರು. ಸುದ್ದಿಗೋಷ್ಠಿಯಲ್ಲಿ ರವಿ ದಂಡಿನ, ಪ್ರೊ. ಅನಿಲ ವೈದ್ಯ, ಡಾ. ಎನ್.ಎಂ. ಅಂಬನಿ, ಬಸವರಾಜ ಬಿಂಗಿ, ಯಲ್ಲಪ್ಪ ಗುರಿಕಾರ ಹಾಗೂ ವೈ.ಡಿ. ಜಡದೇಲಿ ಉಪಸ್ಥಿತರಿದ್ದರು.

---

## ಮತಗಟ್ಟೆಗಳ ಪುನರಸಂಘಟನೆಗೆ ವೇಗ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ವಿಧಾನಸಭಾ ಕ್ಷೇತ್ರದಲ್ಲಿ ಮತದಾರರ ಪಟ್ಟಿಗಳ ಸಮಗ್ರ, ವಿಶೇಷ ಪರಿಷ್ಕರಣೆ2026ರ ಅಂಗವಾಗಿ 1200ಕ್ಕೂ ಹೆಚ್ಚು ಮತದಾರರಿರುವ ಮತಗಟ್ಟೆಗಳ ಪುನರಸಂಘಟನೆ ಕಾರ್ಯವನ್ನು ಆಗಸ್ಟ್ 8ರೊಳಗೆ ಪೂರ್ಣಗೊಳಿಸಬೇಕು ಎಂದು ಮತದಾರರ ನೋಂದಣಾಧಿಕಾರಿ ಹಾಗೂ ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಶಕಿ ನಂದಾ ಹಣಬರಟ್ಟಿ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸೋಮವಾರ ಶಿರಹಟ್ಟಿ ತಹಸೀಲ್ದಾರ್ ಕಚೇರಿಯಲ್ಲಿ ರಾಷ್ಟ್ರೀಯ ಹಾಗೂ ರಾಜ್ಯ ರಾಜಕೀಯ ಪಕ್ಷಗಳ ಪ್ರತಿನಿಧಿಗಳ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಮನೆ-ಮನೆಗೆ ಭೇಟಿ ನೀಡಿ ಮತದಾರರಿಗೆ ಗಣತಿ ನಮೂನೆ ವಿತರಿಸಿ, ಸ್ವೀಕರಿಸಿದ ನಮೂನೆಗಳನ್ನು ಡಿಜಿಟಲೀಕರಣಗೊಳಿಸುವ ಕಾರ್ಯ ಬಹುತೇಕ ಪೂರ್ಣಗೊಂಡಿದೆ. ಈಗ ಮತದಾರರ ಸಂಖ್ಯೆಯನ್ನು ಆಧರಿಸಿ 1200ಕ್ಕೂ ಹೆಚ್ಚು ಮತದಾರರಿರುವ ಮತಗಟ್ಟೆಗಳನ್ನು ವಿಭಜಿಸಿ ಪುನರಸಂಘಟನೆ ಮಾಡುವ ಕಾರ್ಯ ನಡೆಯುತ್ತಿದೆ ಎಂದು ತಿಳಿಸಿದರು. ಶಿವಾಜಿನಗರ, ಕೋಗನೂರ, ಕುಂದ್ರಳ್ಳಿ, ರಾಮಗೇರಿ, ಆದರಹಳ್ಳಿ, ಹರದಗಟ್ಟಿ, ಹುಲ್ಲೂರು ಸೇರಿದಂತೆ ಹಲವು ಮತಗಟ್ಟೆಗಳನ್ನು ಪುನರಸಂಘಟನೆ ಮಾಡಲಾಗುತ್ತಿದ್ದು, ಲಕ್ಷ್ಮೇಶ್ವರ, ಸೂರಣಗಿ ಹಾಗೂ ಬಾಲೇಹೊಸೂರ ಭಾಗಗಳ ಕೆಲ ಮತಗಟ್ಟೆಗಳನ್ನು ಮರ್ಜ್ ಮಾಡಲಾಗಿದೆ ಎಂದು ವಿವರಿಸಿದರು. ಸಭೆಯಲ್ಲಿ ಶಿರಹಟ್ಟಿ ತಹಸೀಲ್ದಾರ್ ಎ.ಎ. ಮುಳಗುಂದಮಠ, ಲಕ್ಷ್ಮೇಶ್ವರ ತಹಸೀಲ್ದಾರ್ ಧನಂಜಯ, ಬಿಜೆಪಿ ಮುಖಂಡ ಶಂಕರ ಮರಾಠೆ, ಜೆಡಿಎಸ್ ಮುಖಂಡ ಶರಣಪ್ಪ ಹೂಗಾರ, ಕಾಂಗ್ರೆಸ್ ಮುಖಂಡ ಬುಡನಶ್ಯಾ ಮಕಾನದಾರ, ಶಿರಸ್ತೇದಾರ ಜಮೀರ್ ಮನಿಯಾರ, ಎಸ್.ಎಸ್. ಅಸ್ಕಿ, ವಿನೋದಕುಮಾರ ಪಾಟೀಲ ಉಪಸ್ಥಿತರಿದ್ದರು.

---

## ಅರ್ಹರಿಗೆ ಗ್ಯಾರಂಟಿ ಯೋಜನೆ ತಲುಪಿಸಿ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳು ಅರ್ಹ ಫಲಾನುಭವಿಗಳಿಗೆ ಯಾವುದೇ ಲೋಪವಿಲ್ಲದೆ ತಲುಪುವಂತೆ ಅಧಿಕಾರಿಗಳು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಲಕ್ಷ್ಮೇಶ್ವರ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷ ನಾಗರಾಜ ಮಡಿವಾಳ ಹೇಳಿದರು.

ಪಟ್ಟಣದ ತಾಲೂಕು ಪಂಚಾಯಿತಿ ಸಭಾಂಗಣದಲ್ಲಿ ಸೋಮವಾರ ನಡೆದ ಗ್ಯಾರಂಟಿ ಯೋಜನೆಗಳ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಅವರು ಮಾತನಾಡಿದರು. ಗೃಹಜ್ಯೋತಿ, ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ ಹಾಗೂ ಯುವನಿಧಿ ಯೋಜನೆಗಳ ಪ್ರಗತಿಯನ್ನು ಪರಿಶೀಲಿಸಿದ ಅವರು, ಸಾರ್ವಜನಿಕರಿಂದ ಬರುವ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಿ ಬಾಕಿ ಅರ್ಜಿಗಳ ವಿಲೇವಾರಿ ಹಾಗೂ ತಾಂತ್ರಿಕ ಸಮಸ್ಯೆಗಳನ್ನು ಶೀಘ್ರ ಬಗೆಹರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯ ವೇಳೆ ಲಕ್ಷ್ಮವ್ವ ಬಾಲೇಹೊಸೂರ ಎಂಬ ಮಹಿಳೆ ತನ್ನ ಮಕ್ಕಳೊಂದಿಗೆ ಆಗಮಿಸಿ, ಕಳೆದ ಮೂರು ವರ್ಷಗಳಿಂದ ಪಡಿತರ ಚೀಟಿಗಾಗಿ ಅಲೆದಾಡುತ್ತಿದ್ದರೂ ಇನ್ನೂ ಸೌಲಭ್ಯ ದೊರೆತಿಲ್ಲ ಎಂದು ಅಳಲು ತೋಡಿಕೊಂಡರು. ಈ ಕುರಿತು ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚನೆ ನೀಡಲಾಯಿತು. ಸಭೆಯಲ್ಲಿ ಹೆಸ್ಕಾಂ ಎಇಇ ಆಂಜನಪ್ಪ ಬಿ., ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಮೃತ್ಯುಂಜಯ ಗುಡ್ಡದನ್ವೇರಿ, ಕೆಎಸ್‌ಆರ್‌ಟಿಸಿ ಅಧಿಕಾರಿ ಪವಿತ್ರಾ ಪಿ., ವಿವಿಧ ಇಲಾಖೆಗಳ ಅಧಿಕಾರಿಗಳು, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸದಸ್ಯರು ಹಾಗೂ ತಾಪಂ ಇಒ ಮಂಜುಳಾ ಹಕಾರಿ ಉಪಸ್ಥಿತರಿದ್ದರು.

### ನಿವೃತ್ತ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿಗೆ ಅದ್ದೂರಿ ಸನ್ಮಾನ; ಸಾಧಕರಿಗೆ ಗೌರವ

# ಗುರುಭಕ್ತಿ ಇದ್ದರೆ ಬದುಕಿಗೆ ದಿಕ್ಕು



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಜೀವನ ಎಂಬ ಭವಸಾಗರವನ್ನು ದಾಟಿಸುವವನೇ ಗುರು. ಉಸಿರು ಇರುವವರೆಗೂ ದೇವರು, ಹೆತ್ತವರು ಹಾಗೂ ಗುರುವನ್ನು ಸ್ಮರಿಸುತ್ತ ಸನ್ಮಾರ್ಗದಲ್ಲಿ ಬದುಕಬೇಕು. ಗುರುನಾಮ ಸ್ಮರಣೆ ಜೀವನಕ್ಕೆ ಆತ್ಮಬಲ ಮತ್ತು ಸರಿದಾರಿಯನ್ನು ತೋರಿಸುತ್ತದೆ ಎಂದು ಮುಕ್ತಿಮಂದಿರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಪಟ್ಟಣದ ಶ್ರೀ ಬಾಳೇಹಳ್ಳಿಮಠ ಕಲ್ಯಾಣ ಮಂಟಪದಲ್ಲಿ ಭಾನುವಾರ ನಡೆದ ಗುರುವಂದನೆ, ಸಾಧಕರ ಸನ್ಮಾನ, ಪ್ರತಿಭಾ ಪುರಸ್ಕಾರ, ಶೈಕ್ಷಣಿಕ ಕಾರ್ಯಚಟುವಟಿಕೆಗಳು, ಚಿತ್ರಕಲಾ ಪ್ರದರ್ಶನ ಹಾಗೂ ನಿವೃತ್ತ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ ಅವರ ನಿವೃತ್ತಿ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ತಂದೆ-ತಾಯಿ ಜನ್ಮ ನೀಡಿದರೆ, ಗುರು ಬದುಕಿಗೆ ದಿಕ್ಕು, ಗುರಿ ಮತ್ತು ಅರ್ಥ ಕಲ್ಪಿಸುತ್ತಾರೆ. ಅವರ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡು ಸಮಾಜಮುಖಿ ಕಾರ್ಯಗಳಲ್ಲಿ ತೊಡಗುವುದೇ ಗುರುಗಳಿಗೆ ಸಲ್ಲಿಸುವ ನಿಜವಾದ ಗೌರವ. ಹುಟ್ಟು ಅನಿಶ್ಚಿತ, ಸಾವು ನಿಶ್ಚಿತ. ಆದರೆ ಈ ಎರಡರ ನಡುವಿನ ಬದುಕಿನಲ್ಲಿ ಸಮಾಜಕ್ಕೆ ಸಲ್ಲಿಸುವ ಸೇವೆ, ಮಾನವೀಯ ಮೌಲ್ಯಗಳು ಹಾಗೂ ಶಿಕ್ಷಣದ ಮೂಲಕ ಮೂಡಿಸುವ ಸಂಸ್ಕಾರಗಳೇ ಶಾಶ್ವತವಾಗಿ ಉಳಿಯುತ್ತವೆ ಎಂದು ಶ್ರೀಗಳು ಹೇಳಿದರು.

ಟಿಬೇಟಿಯನ್ ಕ್ಯಾಂಪ್‌ನ ಜಂಪಾ ಲೋಬ್ಸಂಗ್ ಗುರೂಜಿ, ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಕೃಷ್ಣ ದೊಡ್ಡಮನಿ ಹಾಗೂ ಸಣ್ಣೀರಪ್ಪ ಹಳೆಪ್ಪನವರ ಮಾತನಾಡಿ, ನಿವೃತ್ತ ಶಿಕ್ಷಣಾಧಿಕಾರಿ ಜಿ.ಎಂ. ಮುಂದಿನಮನಿ ಅವರು ಶಿಕ್ಷಣ ಕ್ಷೇತ್ರಕ್ಕೆ ಸಲ್ಲಿಸಿದ ಸೇವೆ ಸ್ಮರಣೀಯವಾಗಿದೆ. ಶಿಕ್ಷಕ ಎಂದಿಗೂ ನಿವೃತ್ತನಾಗುವುದಿಲ್ಲ; ಆತ ತನ್ನ ವಿದ್ಯಾರ್ಥಿಗಳ ಸಾಧನೆಗಳಲ್ಲಿ ಸದಾ ಜೀವಂತವಾಗಿರುತ್ತಾನೆ ಎಂದು ಹೇಳಿದರು.

ಜಿ.ಎಂ. ಮುಂದಿನಮನಿ ಅವರು ತಮ್ಮ ಸುದೀರ್ಘ ಸೇವಾವಧಿಯಲ್ಲಿ ಸರ್ಕಾರಿ ಶಾಲೆಗಳ ಸಬಲೀಕರಣ,

> **ಉಸಿರು ಇರುವವರೆಗೂ ದೇವರು, ಹೆತ್ತವರು ಹಾಗೂ ಗುರುವನ್ನು ಸ್ಮರಿಸುತ್ತ ಬದುಕಿದಾಗ ಮಾತ್ರ ಜೀವನ ಸಾರ್ಥಕವಾಗುತ್ತದೆ.**
> **- ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು,** ಮುಕ್ತಿಮಂದಿರ

ಗುಣಮಟ್ಟದ ಶಿಕ್ಷಣದ ವಿಸ್ತರಣೆ, ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನ ಹಾಗೂ ಶಿಕ್ಷಣದ ಮೂಲಕ ಸಮಾಜ ಪರಿವರ್ತನೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಶಾಲೆಯನ್ನು ಉತ್ತಮ ನಾಗರಿಕರನ್ನು ರೂಪಿಸುವ ದೇವಾಲಯವನ್ನಾಗಿ ರೂಪಿಸುವಲ್ಲಿ ಅವರ ಸೇವೆ ಆದರ್ಶಪ್ರಾಯವಾಗಿದೆ ಎಂದು ಗಣ್ಯರು ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಎನ್.ಎಸ್. ಪಟ್ಟಣಶೆಟ್ಟಿ ವಹಿಸಿದ್ದರು. ವೇದಿಕೆಯಲ್ಲಿ ಡಾ. ಎಂ. ರಾಮಚಂದ್ರ, ಐ.ಬಿ. ಬೆನಕೊಪ್ಪ, ಸುಲೇಮಾನ ಕಣಕೆ, ಮಂಜುನಾಥ ಮಾಗಡಿ, ತಿಮ್ಮರಡ್ಡಿ ಮರಡ್ಡಿ, ಸೋಮಣ್ಣ ಡಾಣಗಲ್, ಪ್ರವೀಣ ಬಾಳಿಕಾಯಿ, ಮಹೇಂದ್ರ ಉಡಚಪ್ಪನವರ, ಅಬ್ದುಲ್ ಸತ್ತೂರ, ಶರಣಪ್ರಕಾಶ ಪಾಟೀಲ, ಎಂ.ಕೆ. ಲಮಾಣಿ, ವಿ.ಎ. ಹುಡೇದ, ಜಿ.ಎಸ್. ಉಪ್ಪಿನ, ಹರೀಶ ಲಕ್ಷ್ಮೇಶ್ವರ, ಬಸವರಾಜ ಹಿರೇಮನಿ, ಡಾ. ಸಂಗಮೇಶ ತಮ್ಮನಗೌಡ್ರ, ಬಿ.ಎಸ್. ಹರ್ಲಾಪೂರ, ವಿಜು ಕಿರೇಸೂರ, ಎಂ.ಎನ್. ಭರಮಗೌಡ್ರ ಸೇರಿದಂತೆ ಜನಪ್ರತಿನಿಧಿಗಳು, ಅಧಿಕಾರಿಗಳು, ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಅಭಿಮಾನಿಗಳು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕಲಿಸಿದ ಗುರುಗಳಿಗೆ ಗುರುವಂದನೆ ಸಲ್ಲಿಸಲಾಯಿತು. ಪುಸ್ತಕ ಬಿಡುಗಡೆ ನೆರವೇರಿತು. ಕು. ಪ್ರೀತಂ ಕಬ್ಬೇರಹಳ್ಳಿ, ಕು. ಜ್ಞಾನಾ ಗುರುರಾಜ, ಫಕ್ಕೀರಪ್ಪ ದೊಡ್ಡಮನಿ ಹಾಗೂ ಡಾ. ಎಚ್.ಸಿ. ದಿವ್ಯಶಂಕರ ಅವರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಬಳಿಕ ಜಿ.ಎಂ. ಮುಂದಿನಮನಿ ದಂಪತಿಗಳನ್ನು ಅಭಿಮಾನಿ ಬಳಗ ಹಾಗೂ ಶಿಕ್ಷಕ ಬಳಗದವರು ಪಟ್ಟಣದಲ್ಲಿ ಸಾರೋಟ ಮೆರವಣಿಗೆ ನಡೆಸಿ ಅದ್ದೂರಿಯಾಗಿ ಸನ್ಮಾನಿಸಿದರು.

## ಮುಪ್ಪಿನ ಬಸವಲಿಂಗ ಶ್ರೀಗಳ ಪುರಪ್ರವೇಶ ಇಂದು

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಜಗದ್ಗುರು ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಉತ್ತರಾಖಂಡ ರಾಜ್ಯದ ಟಿಹ್ರಿಗಡ್ವಾಲ್ ಜಿಲ್ಲೆಯ ದೇವಪ್ರಯಾಗದ ಅಲಕನಂದಾ ನದೀತೀರದಲ್ಲಿ 11 ದಿನಗಳ ಕಾಲ ಮೌನಾನುಷ್ಠಾನ ಹಾಗೂ ಆಧ್ಯಾತ್ಮಿಕ ಸಾಧನೆ ಪೂರ್ಣಗೊಳಿಸಿದ್ದು, ಆಗಸ್ಟ್ 4ರಂದು ಹಾಲಕೆರೆಗೆ ಪುರಪ್ರವೇಶ ಮಾಡಲಿದ್ದಾರೆ.


ಈ ಸಂದರ್ಭದಲ್ಲಿ ಶ್ರೀಮಠದ ಭಕ್ತರಿಂದ ಆಗಸ್ಟ್ 4ರಂದು ಬೆಳಿಗ್ಗೆ 10 ಗಂಟೆಗೆ ಹಾಲಕೆರೆ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದಲ್ಲಿ ಶ್ರೀಗಳಿಗೆ ಭಕ್ತಿಪೂರ್ವಕ ಸ್ವಾಗತ ಸಮಾರಂಭ ಏರ್ಪಡಿಸಲಾಗಿದೆ.

ಹಾಲಕೆರೆ ಶ್ರೀಮಠದ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ವಳಬಳ್ಳಾರಿಯ ಸುವರ್ಣಗಿರಿ ವಿರಕ್ತಮಠದ ಬಸವಲಿಂಗ ಮಹಾಸ್ವಾಮಿಗಳು ಹಾಗೂ ಸೋಮಸಮುದ್ರದ ಕೊಟ್ಟೂರು ಸ್ವಾಮಿ ಶಾಖಾಮಠದ ಸಿದ್ದಲಿಂಗ ಮಹಾಸ್ವಾಮಿಗಳು ಮೌನಾನುಷ್ಠಾನ ಸಂಪನ್ನಗೊಳಿಸಿ ಪುರಪ್ರವೇಶ ಮಾಡಲಿದ್ದಾರೆ.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ನದಿಚಾಗಿವಳಬಳ್ಳಾರಿ ಸುವರ್ಣಗಿರಿ ವಿರಕ್ತಮಠದ ಡಾ. ಸಿದ್ದಲಿಂಗ ಮಹಾಸ್ವಾಮಿಗಳು ವಹಿಸಲಿದ್ದು, ನಿಡಗುಂದಿಕೊಪ್ಪ ಶಾಖಾ ಶಿವಯೋಗಮಂದಿರದ ಚನ್ನಬಸವ ಮಹಾಸ್ವಾಮಿಗಳು, ದರೂರು ಸಂಗನಬಸವೇಶ್ವರ ಮಠದ ಕೊಟ್ಟೂರು ಮಹಾಸ್ವಾಮಿಗಳು, ಕುರುಗೋಡು ಕೊಟ್ಟೂರು ಸ್ವಾಮಿ ಶಾಖಾಮಠದ ನಿರಂಜನ ಪ್ರಭು ಮಹಾಸ್ವಾಮಿಗಳು, ಬೂದುಗುಂಪ ಶಾಖಾಮಠದ ಸಿದ್ದೇಶ್ವರ ಮಹಾಸ್ವಾಮಿಗಳು ಹಾಗೂ ಶ್ರೀಧರಗಡ್ಡೆ ಶಾಖಾಮಠದ ಮರಿ ಕೊಟ್ಟೂರು ದೇಶಿಕರು ಸಮ್ಮುಖ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಶಾಸಕ ಜಿ.ಎಸ್. ಪಾಟೀಲ ಭಾಗವಹಿಸಲಿದ್ದು, ಶ್ರೀಗಳ ಪುರಪ್ರವೇಶದ ಅಂಗವಾಗಿ ವಿಶೇಷ ಪೂಜೆ, ಆಶೀರ್ವಚನ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಜರುಗಲಿವೆ ಎಂದು ಶ್ರೀಮಠದ ಪ್ರಕಟಣೆ ತಿಳಿಸಿದೆ.

## ಮಾಜಿ ಸಚಿವ ಮುರುಗೇಶ ನಿರಾಣಿಗೆ ಸನ್ಮಾನ



**ವಿಜಯಸಾಕ್ಷಿ ಸುದ್ದಿ, ಗದಗ**

ವಿಜಯ ಸೌಹಾರ್ದ ಕ್ರೆಡಿಟ್ ಸಹಕಾರಿ ಸಂಘದ 73ನೇ ನೂತನ ಶಾಖೆಯ ಉದ್ಘಾಟನಾ ಕಾರ್ಯಕ್ರಮಕ್ಕೆ ಗದಗ ನಗರಕ್ಕೆ ಆಗಮಿಸಿದ್ದ ಮಾಜಿ ಸಚಿವ ಮುರುಗೇಶ ನಿರಾಣಿ ಅವರಿಗೆ ಕಂಬಳಿ ಹೊದಿಸಿ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಗದಗ ಜಿಲ್ಲಾ ಬಿಜೆಪಿ ಪ್ರಕೋಷ್ಠಗಳ ಸಹ ಸಂಯೋಜಕ ರಮೇಶ ಎನ್. ಸಜ್ಜಗಾರ, ಕುರುಬ ಸಮಾಜದ ಮುಖಂಡ ಶಿವು ಡಂಬಳ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸಿದ್ದಣ್ಣ ಪಲ್ಲೇದ, ನಿಗಮ ಮಂಡಳಿ ಮಾಜಿ ಅಧ್ಯಕ್ಷ ಎಂ.ಎಸ್. ಕರಿಗೌಡ್ರು, ಬಿಜೆಪಿ ಗದಗ ಜಿಲ್ಲಾ ಅಧ್ಯಕ್ಷ ರಾಜು ಕುರುಡಗಿ, ಬಿಜೆಪಿ ಮುಖಂಡ ಭೀಮಸಿಂಗ ರಾಠೋಡ, ಬಿಜೆಪಿ ನಗರ ಮಂಡಲ ಅಧ್ಯಕ್ಷ ಸುರೇಶ ಮರಳಪ್ಪನವರ, ನಿವೃತ್ತ ಶಿಕ್ಷಕರಾದ ಚಂದ್ರಶೇಖರ ಜೋರಗಸ್ತಿ, ಗುಡದಪ್ಪ ಹಂಚಿನಾಳ, ಆನಂದ ಬೋಸಗಿ, ಮಂಜುನಾಥ ಶಾಂತಗೇರಿ, ರವಿ ಮಾನ್ವಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಶಾಸಕ ಡಾ. ಚಂದ್ರು ಲಮಾಣಿ ಜನ್ಮದಿನ ರೋಗಿಗಳಿಗೆ ಹಾಲು-ಹಣ್ಣು ವಿತರಣೆ



**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಶಿರಹಟ್ಟಿ ನಗರದ ಭಾರತೀಯ ಜನತಾ ಪಕ್ಷದ ವತಿಯಿಂದ ಶಾಸಕ ಡಾ. ಚಂದ್ರು ಲಮಾಣಿ ಅವರ ಜನ್ಮದಿನದ ಅಂಗವಾಗಿ ತಾಲೂಕು ಆಸ್ಪತ್ರೆಯಲ್ಲಿ ಶನಿವಾರ ರೋಗಿಗಳಿಗೆ ಹಾಲು, ಹಣ್ಣು ಹಾಗೂ ಬ್ರೆಡ್ ವಿತರಿಸಿ ಜನ್ಮದಿನವನ್ನು ಅರ್ಥಪೂರ್ಣವಾಗಿ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಬಿಜೈಪಿ ನಗರ ಘಟಕದ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಬಿಜೈಪಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಫಕ್ಕೀರೇಶ ರಟ್ಟಿಹಳ್ಳಿ, ಸಂದೀಪ ಕಪ್ಪತ್ತನವರ, ಜಾನು ಲಮಾಣಿ, ಬಸವರಾಜ ವಡವಿ, ನಂದಾ ಪಲ್ಲೇದ, ಗೂಳಪ್ಪ ಕರಿಗಾರ, ಅಕ್ಬರಸಾಬ ಯಾದಗಿರಿ, ರಾಮಣ್ಣ ಕಂಬಳಿ, ವಿಠ್ಠಲ ಭಿಡವೆ, ಶ್ರೀನಿವಾಸ ಬಾರಬಾರ, ಪರಶುರಾಮ ಡೊಂಕಬಳ್ಳಿ, ಮಲ್ಲಿಕಾರ್ಜುನ ಕಬಾಡಿ, ವಿನೋದ ಕಪ್ಪತ್ತನವರ, ವೀರನಗೌಡ ಪಾಟೀಲ, ಸಂಜು ಸೋಗಿನ, ಶಶಿ ಪೂಜಾರ, ಜಗದೀಶ ತೇಲಿ, ಸಂತೋಷ ತೋಡೆಕಾರ, ಲಕ್ಷ್ಮಣ ಲಮಾಣಿ, ಬಸವರಾಜ ಕಲ್ಯಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ರಾಜ್ಯ ಮಹಿಳಾ ಆಯೋಗಕ್ಕೆ ಜೈ ಭೀಮ್ ಸಂಘರ್ಷ ಸಮಿತಿ ಮನವಿ

# ದಲಿತರ ಸಮಸ್ಯೆಗಳಿಗೆ ಶೀಘ್ರ ನ್ಯಾಯ ಒದಗಿಸಿ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ದಲಿತರ ಮೇಲಿನ ದೌರ್ಜನ್ಯ, ಅಸ್ಪೃಶ್ಯತೆ ಸೇರಿದಂತೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಜನರು ಎದುರಿಸುತ್ತಿರುವ ವಿವಿಧ ಸಮಸ್ಯೆಗಳಿಗೆ ಸೂಕ್ತ ನ್ಯಾಯ ಒದಗಿಸಬೇಕೆಂದು ಆಗ್ರಹಿಸಿ ಜೈ ಭೀಮ್ ಸಂಘರ್ಷ ಸಮಿತಿ ಗದಗ ಜಿಲ್ಲಾ ಘಟಕದ ವತಿಯಿಂದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರಿಗೆ ಮನವಿ ಸಲ್ಲಿಸಲಾಯಿತು.

ಮನವಿ ಸಲ್ಲಿಸಿದ ಬಳಿಕ ಮಾತನಾಡಿದ ಜಿಲ್ಲಾ ಘಟಕದ ಅಧ್ಯಕ್ಷ ಗಣೇಶ ವಾಯ್. ಹುಬ್ಬಳ್ಳಿ, ಗದಗ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿ ದಲಿತರ ಮೇಲಿನ ದೌರ್ಜನ್ಯ ಹಾಗೂ ಅಸ್ಪೃಶ್ಯತೆ ಇನ್ನೂ ಜೀವಂತವಾಗಿರುವುದು ಆತಂಕಕಾರಿ ಸಂಗತಿಯಾಗಿದೆ.

ಇದರ ಜೊತೆಗೆ ವಿದ್ಯಾರ್ಥಿಗಳ ವಿದ್ಯಾರ್ಥಿವೇತನ ಸಮಸ್ಯೆ, ಪೌರ ಕಾರ್ಮಿಕರ ಸಮಸ್ಯೆ, ಹೊರಗುತ್ತಿಗೆ ನೌಕರರನ್ನು ಖಾಯಂಗೊಳಿಸುವುದು,

ದೇವದಾಸಿಯರ ಸಮಸ್ಯೆ ಸೇರಿದಂತೆ ರಾಜ್ಯದಾದ್ಯಂತ ದಲಿತ ಸಮುದಾಯ ಎದುರಿಸುತ್ತಿರುವ ಹಲವು ಸಮಸ್ಯೆಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿ ಪರಿಹಾರ ಕಲ್ಪಿಸಬೇಕು ಎಂದು ಒತ್ತಾಯಿಸಿದರು.

ಮನವಿಯಲ್ಲಿ ಎಸ್.ಸಿ./ಎಸ್.ಟಿ. ಸಮುದಾಯದ ಸಮಸ್ಯೆಗಳ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಸಂತ್ರಸ್ತರಿಗೆ ನ್ಯಾಯ ದೊರಕುವಂತೆ ಅಗತ್ಯ ಕ್ರಮ ಕೈಗೊಳ್ಳುವಂತೆ ರಾಜ್ಯ ಮಹಿಳಾ ಆಯೋಗವನ್ನು ಆಗ್ರಹಿಸಲಾಯಿತು.



ಈ ಸಂದರ್ಭದಲ್ಲಿ ಜೈ ಭೀಮ್ ಸಂಘರ್ಷ ಸಮಿತಿಯ ಉಪಾಧ್ಯಕ್ಷ ಮಂಜುನಾಥ ಎಫ್. ತೌಜಲ್, ರೋಣ ತಾಲೂಕು ಅಧ್ಯಕ್ಷ ಬಸವರಾಜ ಬದಾಮಿ, ಅಲ್ಪಸಂಖ್ಯಾತರ ಘಟಕದ ಜಿಲ್ಲಾಧ್ಯಕ್ಷ ರಾಷ್ಟ್ರೀನ್ ಜೋಸೆಪ್, ಉಪಾಧ್ಯಕ್ಷ ರಾಜೇಶ ವಿ. ಶೆಟ್ಟಿ, ಯುವ ಘಟಕದ ಜಿಲ್ಲಾಧ್ಯಕ್ಷ ಇಮಾಮಹುಸೇನ ಕುನ್ನಿಬಾವಿ, ಕಾರ್ಯದರ್ಶಿ ಸಮೀರ ಅಹ್ಮದ್ ಕುನ್ನಿಬಾವಿ, ಬಾಬು ಬಳ್ಳಾರಿ, ಮಂಜುನಾಥ ಸಂದಿಮನಿ, ಯುವ ಘಟಕದ ಅಧ್ಯಕ್ಷ ಪ್ರೇಮಕುಮಾರ ಹುಬ್ಬಳ್ಳಿ, ಮಂಜುನಾಥ ಸುಂಕದ, ಶ್ರೀಕಾಂತ ಹಲವಾಗಲಿ, ಹೇಮಂತ ಹುಬ್ಬಳ್ಳಿ, ವಿರುಪಾಕ್ಷ ಗೌಡರ, ಗಿರೀಶ ಚಳಗೇರಿ, ರಫೀಕ ನವಲಗುಂದ, ಫರದೀನ ಕಾಟಾಪುರ, ಮಲ್ಲೇಶ ಮೇಳದಾಳಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಮಕ್ಕಳಲ್ಲಿ ಪ್ರಶ್ನಿಸುವ ಮನೋಭಾವ ಬೆಳೆಸುವ ಶಿಕ್ಷಣ ಅಗತ್ಯ: ಡಾ. ನಿಂಗು ಸೊಲಗಿ

# ಸೃಜನಶೀಲ ಮಕ್ಕಳೇ ಸಮಾಜದ ನಿಜವಾದ ಶಕ್ತಿ!



**ವಿಜಯಸಾಕ್ಷಿ ಸುದ್ದಿ, ಗದಗ**

ಶರಣರ ವಚನಗಳು ನಮ್ಮೊಳಗಿನ ಅವಗುಣಗಳನ್ನು ತೊಡೆದು ಜಾಗೃತ ಮನಸ್ಸಿನ ಬದುಕಿಗೆ ದಾರಿ ತೋರಿಸುತ್ತವೆ. ವಚನ ಸಾಹಿತ್ಯ, ಕಾಯಕ, ದಾಸೋಹ ಹಾಗೂ ಅನುಭಾವ ಮಂಟಪದಂತಹ ಪ್ರಜಾಸತ್ತಾತ್ಮಕ ಮೌಲ್ಯಗಳನ್ನು ನೀಡಿದ ಶರಣ ಸಂಸ್ಕೃತಿಯೇ ಕನ್ನಡಿಗರ ಅಸ್ಮಿತೆಯಾಗಿದೆ ಎಂದು ಮಕ್ಕಳ ಸಾಹಿತಿ ಹಾಗೂ ರಂಗಕರ್ಮಿ ಡಾ. ನಿಂಗು ಸೊಲಗಿ ಹೇಳಿದರು.

ಗದಗ ತಾಲೂಕಿನ ಹೊಸಳ್ಳಿ ಗ್ರಾಮದ ಬೂದೀಶ್ವರ ಮಠದಲ್ಲಿ ಶನಿವಾರ ನಡೆದ 2ನೇ ಮಕ್ಕಳ ಶರಣ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷರಾಗಿ ಮಾತನಾಡಿದ ಅವರು, ಶರಣರ ಇವ ನಮ್ಮವ ಎಂಬ ಸಮಾನತೆಯ ತತ್ವ, ಪಂಪ ಹಾಗೂ ಕನಕದಾಸರಂತಹ ಮಹಾಕವಿಗಳ ಸಂದೇಶ ಕನ್ನಡ ಸಾಹಿತ್ಯದುದ್ದಕ್ಕೂ ಸಾಮರಸ್ಯದ ಮೌಲ್ಯಗಳನ್ನು ಬಿತ್ತಿದೆ ಎಂದು ಹೇಳಿದರು.

ಮೇವುಂಡಿ ಮಲ್ಲಾರಿಯವರಂತಹ ಸಾಹಿತಿಗಳು ತಮ್ಮ ಕೃತಿಗಳ ಮೂಲಕ ಅಸ್ಪೃಶ್ಯತೆಯಂತಹ ಸಾಮಾಜಿಕ ಪಿಡುಗುಗಳ ವಿರುದ್ಧ ಮಾನವೀಯತೆಯ ಧ್ವನಿ ಎತ್ತಿದ್ದಾರೆ. ಮಕ್ಕಳಲ್ಲಿ ಇಂತಹ ಸಂವೇದನೆಗಳನ್ನು ಬೆಳೆಸುವ ಕೆಲಸ ನಿರಂತರವಾಗಿ ನಡೆಯಬೇಕಿದೆ ಎಂದು ತಿಳಿಸಿದರು.

ಕನ್ನಡ ಸಾಹಿತ್ಯ ಪರಂಪರೆಯಲ್ಲಿ ಪಂಡಿತ ಪರಂಪರೆ, ಜನಪದ ಪರಂಪರೆ ಹಾಗೂ ವಚನ-ದಾಸ ಪರಂಪರೆ ಎಂಬ ಮೂರು ಪ್ರಮುಖ ಧಾರೆಗಳಿವೆ. ಇಂದಿನ ತಾಂತ್ರಿಕ ಯುಗದಲ್ಲಿ ಮಕ್ಕಳಿಗೆ ವಚನ ಸಾಹಿತ್ಯ, ಕೃಷಿ ಸಂಸ್ಕೃತಿ ಹಾಗೂ ದಾಸೋಹ ತತ್ವಗಳನ್ನು ಅವರ ವಯೋಮಾನಕ್ಕೆ ತಕ್ಕಂತೆ ಕಥೆ, ನಾಟಕ ಹಾಗೂ ವಾಚಿಕೆಯ ಮೂಲಕ ಪರಿಚಯಿಸಬೇಕಿದೆ ಎಂದು ಹೇಳಿದರು.

ಇಂದಿನ ಪರೀಕ್ಷಾ ಕೇಂದ್ರಿತ ಶಿಕ್ಷಣ ವ್ಯವಸ್ಥೆ ಮಕ್ಕಳಲ್ಲಿರುವ ಸಹಜ ಕುತೂಹಲ ಮತ್ತು ಸೃಜನಶೀಲತೆಯನ್ನು ಕುಂಠಿತಗೊಳಿಸುತ್ತಿದೆ. ಮಕ್ಕಳು ಕೇವಲ ಅಂಕ ಗಳಿಸುವ ಯಂತ್ರಗಳಲ್ಲ; ಅವರಲ್ಲಿರುವ ಪ್ರತಿಭೆ ಮತ್ತು ಸಂವೇದನೆಗಳನ್ನು ಗುರುತಿಸಿ ಬೆಳೆಸಬೇಕಾಗಿದೆ ಎಂದು ಅಭಿಪ್ರಾಯಪಟ್ಟರು.

ಪಬ್‌ಜಿ ಸೇರಿದಂತೆ ಹಿಂಸಾತ್ಮಕ ವಿಡಿಯೊ ಗೇಮ್‌ಗಳ ಬದಲಿಗೆ ಮಕ್ಕಳಿಗೆ ಜಾನಪದ ಆಟಗಳ

> **ಮಕ್ಕಳು ಬರಿದಾದ ಬಿಳಿ ಹಾಳೆಯಲ್ಲ; ಅವರಲ್ಲಿರುವ ಸೃಜನಶೀಲತೆ, ಕುತೂಹಲ ಮತ್ತು ಸಂವೇದನೆಗಳನ್ನು ಬೆಳೆಸಿದಾಗ ಮಾತ್ರ ಸಮಾಜದ ಭವಿಷ್ಯ ಉಜ್ವಲವಾಗುತ್ತದೆ.**
> **- ಡಾ. ನಿಂಗು ಸೊಲಗಿ,** ಮಕ್ಕಳ ಸಾಹಿತ್ಯ ಸಮ್ಮೇಳನದ ಸರ್ವಾಧ್ಯಕ್ಷ

ಪರಿಚಯ ಮಾಡಿಕೊಡಬೇಕು. ಇಂತಹ ಆಟಗಳು ಸಾಂಘಿಕ ಮನೋಭಾವ, ಪರಿಸರ ಪ್ರಜ್ಞೆ ಹಾಗೂ ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸುವ ಗುಣವನ್ನು ಬೆಳೆಸುತ್ತವೆ ಎಂದು ಹೇಳಿದರು.

ಮಕ್ಕಳ ಸಾಹಿತ್ಯದಲ್ಲಿ ಹಳೆಯ ಮೌಲ್ಯಗಳ ಪುನರ್‌ಮೌಲ್ಯಮಾಪನ ಅಗತ್ಯವಾಗಿದೆ. ಕಣ್ತೆರೆದು ನೋಡು, ಕಿವಿಗೊಟ್ಟು ಕೇಳು, ಬಾಯ್ತೆರೆದು ಹೇಳು ಎಂಬ ಜಾಗೃತ ಮನೋಭಾವವನ್ನು ಮಕ್ಕಳಲ್ಲಿ ಬೆಳೆಸಬೇಕು. ಶಿಕ್ಷಣ ಕೇವಲ ಪರೀಕ್ಷೆಗೆ ಸೀಮಿತವಾಗದೆ, ಪೋಷಕರು, ಶಿಕ್ಷಕರು ಹಾಗೂ ಮಕ್ಕಳು ಸೃಜನಶೀಲ ಚಿಂತನೆಯತ್ತ ಸಾಗುವ ವಾತಾವರಣ ನಿರ್ಮಾಣವಾಗಬೇಕು ಎಂದು ಕರೆ ನೀಡಿದರು.

### ಗದಗದಲ್ಲಿ ಸ್ವತಂತ್ರ ವಿತರಣಾ ಕೇಂದ್ರ ಆರಂಭ; ಅದೇ ದಿನ ಪಾರ್ಸೆಲ್ ವಿತರಣೆಗೆ ಒತ್ತು

# ಅಂಚೆ ಸೇವೆಗೆ ಡಿಜಿಟಲ್ ವೇಗ!

**ವಿಜಯಸಾಕ್ಷಿ ಸುದ್ದಿ, ಗದಗ**

ನಗರ ಪ್ರದೇಶಗಳಲ್ಲಿ ಅಂಚೆ ಸೇವೆಯನ್ನು ಇನ್ನಷ್ಟು ವೇಗವಾಗಿ, ಪಾರದರ್ಶಕವಾಗಿ ಹಾಗೂ ಗ್ರಾಹಕ ಸ್ನೇಹಿಯಾಗಿ ರೂಪಿಸುವ ಉದ್ದೇಶದಿಂದ ಗದಗ ನಗರದಲ್ಲಿ ಭಾರತೀಯ ಅಂಚೆ ಇಲಾಖೆಯ ನೂತನ ಸ್ವತಂತ್ರ ವಿತರಣಾ ಕೇಂದ್ರವನ್ನು ಶನಿವಾರ ಉದ್ಘಾಟಿಸಲಾಯಿತು.

ಕೇಂದ್ರವನ್ನು ಉದ್ಘಾಟಿಸಿ ಮಾತನಾಡಿದ ಗದಗ ವಿಭಾಗೀಯ ಅಂಚೆ ಅಧೀಕ್ಷಕ ಎಸ್.ಎಸ್. ಶಿರಹಟ್ಟಿ, ನಗರಗಳು ಹಾಗೂ ಪಕ್ಕದ ಪ್ರದೇಶಗಳಲ್ಲಿ ಬುಕ್ ಆಗುವ ಪಾರ್ಸೆಲ್‌ಗಳನ್ನು ಗ್ರಾಹಕರಿಗೆ ಅದೇ ದಿನ ತಲುಪಿಸುವಲ್ಲಿ ಸ್ವತಂತ್ರ ವಿತರಣಾ ಕೇಂದ್ರಗಳು ಮಹತ್ವದ ಪಾತ್ರವಹಿಸಲಿವೆ ಎಂದು ಹೇಳಿದರು.

ಇ-ಕಾಮರ್ಸ್ ಸಂಸ್ಥೆ ಫ್ಲಿಪ್‌ಕಾರ್ಟ್ ಭಾರತೀಯ ಅಂಚೆ ಇಲಾಖೆಯೊಂದಿಗೆ ಒಪ್ಪಂದ ಮಾಡಿಕೊಂಡಿರುವುದರಿಂದ ಗ್ರಾಹಕರಿಗೆ ಪಾರ್ಸೆಲ್ ಸೇವೆ ಇನ್ನಷ್ಟು ಸುಲಭವಾಗಿ ಹಾಗೂ ವೇಗವಾಗಿ ತಲುಪಲಿದೆ.

ತಂತ್ರಜ್ಞಾನದ ಅಳವಡಿಕೆ, ಸಿಬ್ಬಂದಿಯ ದಕ್ಷತೆ ಹಾಗೂ ಗ್ರಾಹಕ ಕೇಂದ್ರಿತ ಸೇವೆಯಿಂದ ಭಾರತೀಯ ಅಂಚೆ ಇಲಾಖೆ ಮತ್ತಷ್ಟು ಜನಪ್ರಿಯ ಸೇವಾ ಸಂಸ್ಥೆಯಾಗಿ ಬೆಳೆಯಲಿದೆ ಎಂದು ತಿಳಿಸಿದರು.

ಗ್ರಾಹಕರ ಅನುಕೂಲಕ್ಕಾಗಿ ಒಟಿಪಿ ಆಧಾರಿತ ಸುರಕ್ಷಿತ ವಿತರಣೆ, ಆನ್‌ಲೈನ್ ಪಾವತಿ, ಎಸ್‌ಎಂಎಸ್ ಅಧಿಸೂಚನೆ ಸೇರಿದಂತೆ ಹಲವು ಆಧುನಿಕ ಸೇವೆಗಳನ್ನು ಅಂಚೆ ಇಲಾಖೆ ಜಾರಿಗೆ ತಂದಿದೆ ಎಂದು ವಿವರಿಸಿದರು.

ಗದಗ ಉಪ ವಿಭಾಗದ ವಿನೋದಕುಮಾರ ಮೇದಾರ ಮಾತನಾಡಿ, ಭಾರತೀಯ ಅಂಚೆ ಇಲಾಖೆಯ ಆಧುನೀಕರಣದ ಭಾಗವಾಗಿ ಆರಂಭಿಸಿರುವ ಸ್ವತಂತ್ರ ವಿತರಣಾ ಕೇಂದ್ರವು ಗ್ರಾಹಕರಿಗೆ ಗುಣಮಟ್ಟದ ಮತ್ತು ತ್ವರಿತ ಸೇವೆ ಒದಗಿಸುವಲ್ಲಿ ಪ್ರಮುಖ ಹೆಜ್ಜೆಯಾಗಿದೆ. ಭಾರತೀಯ ಅಂಚೆ ಇಲಾಖೆ ಕೇವಲ ಸರ್ಕಾರಿ ಸಂಸ್ಥೆಯಲ್ಲ, ಅದು ದೇಶದ ಭಾವನಾತ್ಮಕ ಕೊಂಡಿಯಾಗಿದ್ದು, ಖಾಸಗಿ ಸಂಸ್ಥೆಗಳು ತಲುಪದ ಪ್ರದೇಶಗಳಲ್ಲಿಯೂ ಜನಸೇವೆ ಮಾಡುತ್ತಿರುವ ವಿಶ್ವಾಸಾರ್ಹ ಸಂಸ್ಥೆಯಾಗಿದೆ ಎಂದು ಹೇಳಿದರು.

ರೋಣ ಉಪ ವಿಭಾಗದ ಅಂಚೆ ನಿರೀಕ್ಷಕ ವೆಂಕಟೇಶರೆಡ್ಡಿ ಕೊಳ್ಳಿ, ಐಡಿಸಿ ಮೇಲ್ವಿಚಾರಕ ಡಿ.ಜಿ. ಮ್ಯಾಗೇರಿ ಮಾತನಾಡಿದರು. ಪ್ರಧಾನ ಅಂಚೆ ಪಾಲಕ ಲಕ್ಷ್ಮಣ ಅಸುಂಡಿ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಉಪ ಅಂಚೆ ಪಾಲಕರಾದ ಮಂಜುನಾಥ ಕುರಿಯವರ, ಶರಣಪ್ಪ ನಾಯ್ಕರ, ಶಂಕರ ಕುಬ್ಬಳ್ಳಿ, ಬಸವರಾಜ ಶೇಡದ, ಮನೋಹರ ಕಡಿಯವರ ಸೇರಿದಂತೆ ಅಂಚೆ ಇಲಾಖೆಯ ಸಿಬ್ಬಂದಿ ಉಪಸ್ಥಿತರಿದ್ದರು.

ಮೇಘಾನಾ ಕುಲಕರ್ಣಿ ಪ್ರಾರ್ಥಿಸಿದರು. ಅಂಚೆ ಸಹಾಯಕ ಎಂ.ಟಿ. ಕರಿಗಾರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.



> **ಗದಗ-ಬೆಟಗೇರಿ ಅವಳಿ ನಗರದ ಎಲ್ಲಾ ಅಂಚೆ ಪತ್ರಗಳು ಮತ್ತು ಪಾರ್ಸೆಲ್‌ಗಳನ್ನು ಗ್ರಾಹಕರಿಗೆ ತ್ವರಿತವಾಗಿ ತಲುಪಿಸಲು ಒಂದೇ ಸೂರಿನಡಿ 39 ಅಂಚೆ ಬಟವಾಡೆ ಸಿಬ್ಬಂದಿಯನ್ನು ನಿಯೋಜಿಸಲಾಗುತ್ತಿದೆ. ಶೇ.100ರಷ್ಟು ಅಂಚೆ ಬಟವಾಡೆಗೆ ಆದ್ಯತೆ ನೀಡಲಾಗುವುದು.**
> **- ಎಸ್.ಎಸ್. ಶಿರಹಟ್ಟಿ,** ಗದಗ ವಿಭಾಗೀಯ ಅಂಚೆ ಅಧೀಕ್ಷಕರು

## ಸಂಕ್ಷಿಪ್ತ ಸುದ್ದಿಗಳು

### ತೊಂಡಿಹಾಳ ರಸ್ತೆ ದುರಸ್ತಿ, ನರೇಗಲ್ಲ-ಕೋಡಿ ಕೊಪ್ಪ ಜೋಡು ರಸ್ತೆಗೆ ಪಾದಚಾರಿ ಮಾರ್ಗ ನಿರ್ಮಾಣಕ್ಕೆ ಒತ್ತಾಯ

# ನಿವೃತ್ತಿಯಲ್ಲೂ ಸಮಾಜಸೇವೆ ಮುಂದುವರಿಯಲಿ




**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಿವೃತ್ತ ನೌಕರರು ತಮ್ಮ ಸೇವಾವಧಿಯಲ್ಲಿ ಗಳಿಸಿದ ಅನುಭವ, ಜ್ಞಾನ ಮತ್ತು ಪರಿಣತಿಯನ್ನು ಸಮಾಜದ ಅಭಿವೃದ್ಧಿಗೆ ಸದ್ಬಳಕೆ ಮಾಡಬೇಕು ಎಂದು ಡಾ. ಕೆ.ಬಿ. ಧನ್ನೂರ ಅಭಿಪ್ರಾಯಪಟ್ಟರು.

ಪಟ್ಟಣದ ನಿವೃತ್ತ ನೌಕರರ ಸಂಘದ ಸಭೆಯಲ್ಲಿ ಮಾತನಾಡಿದ ಅವರು, ನರೇಗಲ್ಲ ಪಟ್ಟಣದಲ್ಲಿ ಅಭಿವೃದ್ಧಿ ಕಾಮಗಾರಿಗಳು ಸಮರ್ಪಕವಾಗಿ ನಡೆಯುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ತೊಂಡಿಹಾಳ ರಸ್ತೆ ಶೀಘ್ರ ದುರಸ್ತಿಗೊಂಡು ಸಾರ್ವಜನಿಕ ಸಂಚಾರಕ್ಕೆ ಅನುಕೂಲ ಕಲ್ಪಿಸಬೇಕು. ನರೇಗಲ್ಲಕೋಡಿಕೊಪ್ಪ ಜೋಡು ರಸ್ತೆಯ ಎರಡೂ ಬದಿಯಲ್ಲಿ ಪಾದಚಾರಿ ಮಾರ್ಗ ಹಾಗೂ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದಿರುವುದು ಆತಂಕಕಾರಿ. ಇದೇ ರಸ್ತೆಯಲ್ಲಿ ಪ್ರತಿದಿನ ಸಾವಿರಾರು ವಿದ್ಯಾರ್ಥಿಗಳು ಶಾಲೆ-ಕಾಲೇಜುಗಳಿಗೆ ಸಂಚರಿಸುತ್ತಿದ್ದು, ವಾಹನಗಳ ದಟ್ಟಣೆಯೂ ಹೆಚ್ಚಿದೆ. ಯಾವುದೇ ಅನಾಹುತ ಸಂಭವಿಸಿದರೆ ಅದಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿದರು.

ಎಂ.ಎ. ಹಿರೆವಡೆಯರ ಮಾತನಾಡಿ, ನಿವೃತ್ತ ನೌಕರರ ಸಂಘದ ಸಾಧನೆಗಳು ಹಾಗೂ ಚಟುವಟಿಕೆಗಳನ್ನು ದಾಖಲಿಸುವ ಸಂಪಾದನ ಗ್ರಂಥ ಹೊರತರಬೇಕು. ಇಂತಹ ದಾಖಲೆಗಳು ಮುಂದಿನ ಪೀಳಿಗೆಗೆ ಮಾರ್ಗದರ್ಶಿಯಾಗಲಿವೆ ಎಂದರು.

ಡಯಟ್‌ನ ನಿವೃತ್ತ ಉಪನ್ಯಾಸಕ ಕೆ.ಪಿ. ಸಾಲಿಮಠ ಮಾತನಾಡಿ, ನಿವೃತ್ತಿಯು ಜೀವನದ ಒಂದು ಹಂತ ಮಾತ್ರ. ಸಮಾಜಸೇವೆ ಹಾಗೂ ವ್ಯಕ್ತಿತ್ವ ವಿಕಸನಕ್ಕೆ ನಿವೃತ್ತಿ ಎಂಬುದಿಲ್ಲ. ಸ್ವಯಂ ನಿವೃತ್ತಿ ಪಡೆಯುವ ಮುನ್ನ ಕುಟುಂಬದ ಸದಸ್ಯರ ಒಪ್ಪಿಗೆ ಅಗತ್ಯವಾಗಿದ್ದು, ಪ್ರಸ್ತುತ ನಿವೃತ್ತಿದಾರರಿಗೆ ಪಿಂಚಣಿ ಸೌಲಭ್ಯಗಳು ಸುಲಭವಾಗಿ ದೊರೆಯುತ್ತಿವೆ ಎಂದು ಹೇಳಿದರು.

ಶಿವಯೋಗಿ ಜಕ್ಕಲಿ ಪ್ರಾಸ್ತಾವಿಕವಾಗಿ ಮಾತನಾಡಿ ಸಂಘದ ಚಟುವಟಿಕೆಗಳು ಹಾಗೂ ಮುಂದಿನ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ದೊಡ್ಡಯ್ಯ ಅರವಟಗಿಮಠ ಮಾತನಾಡಿ, ಪಟ್ಟಣದ ಅಭಿವೃದ್ಧಿ ವಿಷಯಗಳ ಕುರಿತು ನಿವೃತ್ತ ನೌಕರರ ಸಂಘದಲ್ಲಿ ನಿರಂತರ ಚರ್ಚೆಗಳು ನಡೆಯುತ್ತಿವೆ. ಸಂಪಾದನ ಗ್ರಂಥ ಹೊರತರುವ ಕುರಿತು ಸದಸ್ಯರು ಒಗ್ಗಟ್ಟಿನಿಂದ ನಿರ್ಧಾರ ಕೈಗೊಳ್ಳಬೇಕು ಎಂದು ಹೇಳಿದರು.

ವೀರಭದ್ರಪ್ಪ ಕೆರಿಯವರ ಸ್ವಾಗತಿಸಿ ನಿರೂಪಿಸಿದರು. ಬಸವರಾಜ ಕಲಾಲಬಂಡಿ ವಂದಿಸಿದರು.

ಸಭೆಯಲ್ಲಿ ಎನ್.ಎಚ್. ಚಿಕ್ಕನಗೌಡ್ರ, ಫಕೀರಪ್ಪ ಧರ್ಮಾಯತ, ಎಸ್.ಬಿ. ಹೊಸಮನಿ, ವೈ.ಆರ್. ಬಸಾಪೂರ, ಎಚ್.ವೈ. ಮಣ್ಣೊಡ್ಡರ, ಎಸ್. ಆರ್. ಬಾಗಲಿ, ಜಿ.ಎ. ಬೆಲ್ಲದ, ಅರುಣ ಕುಲಕರ್ಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

---

### ಗ್ರಾಮ ವಿದ್ಯುತ್ ಪ್ರತಿನಿಧಿ ಮಹೇಶ ಹಿರೇಮಠಗೆ ಹೆಸ್ಕಾಂ ಅಧಿಕಾರಿಗಳಿಂದ ಸನ್ಮಾನ

# ಗ್ರಾಮೀಣ ವಿದ್ಯುತ್ ಸೇವೆಯ ಸಾರಥಿಗೆ ಗೌರವ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**


ಜಕ್ಕಲಿ ಗ್ರಾಮದ ಗ್ರಾಮ ವಿದ್ಯುತ್ ಪ್ರತಿನಿಧಿಯಾಗಿ 22 ವರ್ಷಗಳ ಕಾಲ ಹೆಸ್ಕಾಂ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ಮಹೇಶ ಹಿರೇಮಠ ಅವರಿಗೆ ಶನಿವಾರ ನರೇಗಲ್ಲ ಹೆಸ್ಕಾಂ ಕಚೇರಿಯಲ್ಲಿ ಆತ್ಮೀಯ ಸನ್ಮಾನ ಹಾಗೂ ಭಾವಪೂರ್ಣ ಬೀಳ್ಕೊಡುಗೆ ನೀಡಲಾಯಿತು.

ಅಧ್ಯಕ್ಷತೆ ವಹಿಸಿದ್ದ ರೋಣ ವಿಭಾಗದ ಕಾರ್ಯನಿರ್ವಾಹಕ ಅಭಿಯಂತರ ವಿ.ಟಿ. ರಾಜೂರ ಮಾತನಾಡಿ, ಗ್ರಾಮೀಣ ಭಾಗದಲ್ಲಿ ಹೆಸ್ಕಾಂ ಇಲಾಖೆ ಮತ್ತು ಗ್ರಾಹಕರ ನಡುವಿನ ಸಂಪರ್ಕ ಕೊಂಡಿಯಾಗಿ ಮಹೇಶ ಹಿರೇಮಠ ಅವರು ಪ್ರಾಮಾಣಿಕತೆ, ನಿಷ್ಠೆ ಹಾಗೂ ಕರ್ತವ್ಯಪ್ರಜ್ಞೆಯಿಂದ 22 ವರ್ಷಗಳ ಕಾಲ ಸೇವೆ ಸಲ್ಲಿಸಿ ಇಲಾಖೆಗೆ ಉತ್ತಮ ಹೆಸರು ತಂದಿದ್ದಾರೆ ಎಂದು ಶ್ಲಾಘಿಸಿದರು.

ರೋಣ ಸಹಾಯಕ ಕಾರ್ಯನಿರ್ವಾಹಕ ಎಂಜಿನಿಯರ್ ರಾಘವೇಂದ್ರ ಕೋಚಿ ಮಾತನಾಡಿ, ಗ್ರಾಮೀಣ ವಿದ್ಯುತ್ ಸರಬರಾಜು, ಬಾಕಿ ವಸೂಲಿ ಹಾಗೂ ಇಲಾಖೆಯ ಕಾರ್ಯಗಳನ್ನು ಜವಾಬ್ದಾರಿಯಿಂದ ನಿರ್ವಹಿಸಿದ ಅವರ ಸೇವೆ ಯುವ ಗ್ರಾಮ ವಿದ್ಯುತ್ ಪ್ರತಿನಿಧಿಗಳಿಗೆ ಮಾದರಿಯಾಗಿದೆ ಎಂದರು.

ಸನ್ಮಾನ ಸ್ವೀಕರಿಸಿದ ಮಹೇಶ ಹಿರೇಮಠ, ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳು ಹಾಗೂ ಗ್ರಾಮಸ್ಥರ ಸಹಕಾರದಿಂದಲೇ ತಮ್ಮ ಸೇವೆಯನ್ನು ಯಶಸ್ವಿಯಾಗಿ ನಿರ್ವಹಿಸಲು ಸಾಧ್ಯವಾಯಿತು. ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದಿಸುವುದನ್ನೇ ಕರ್ತವ್ಯವೆಂದು ಭಾವಿಸಿ ಕೆಲಸ ಮಾಡಿದ್ದೇನೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಸ್.ಎಚ್. ಅಮರಶೆಟ್ಟಿ, ಎಂ.ಎನ್. ಮುಲ್ಲಾ, ಐ.ಎ. ಚೌಭಾರಿ, ವಿ.ಆರ್. ಸರ್ವಿ, ಎಂ.ಜೆ. ಹುಡೇದ, ವೀರೇಶ ಸಜ್ಜನ್, ಮರಿಯಪ್ಪ ಅಳವಂಡಿ, ಶರಣಪ್ಪ ಚವಡಿ, ಮಹೇಶ ಹಡಪದ, ಪ್ರಕಾಶ ವಾಲಿ ಸೇರಿದಂತೆ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ, ಗ್ರಾಮ ವಿದ್ಯುತ್ ಪ್ರತಿನಿಧಿಗಳು ಹಾಗೂ ಹಿರೇಮಠ ಅವರ ಕುಟುಂಬಸ್ಥರು ಉಪಸ್ಥಿತರಿದ್ದರು.



**ಪ್ರಾಮಾಣಿಕತೆ ಮತ್ತು ಕರ್ತವ್ಯನಿಷ್ಠೆಯಿಂದ ಸೇವೆ ಸಲ್ಲಿಸಿ ಮಹೇಶ ಹಿರೇಮಠ ಅವರು ಇಲಾಖೆಗೆ ಉತ್ತಮ ಹೆಸರು ತಂದುಕೊಟ್ಟಿದ್ದಾರೆ.**

– **ವಿ.ಟಿ. ರಾಜೂರ,** ಕಾರ್ಯನಿರ್ವಾಹಕ ಅಭಿಯಂತರ, ಹೆಸ್ಕಾಂ ರೋಣ ವಿಭಾಗ

---

### ಕ್ಯಾಂಪ್ಸ್, ವೆಬ್ ಹಾಜರಾತಿಯಿಂದ ಗುಣಾತ್ಮಕ ಶಿಕ್ಷಣ ಸಾಧ್ಯವಿಲ್ಲ; ಬಸವರಾಜ ಗುರಿಕಾರ

# ಸರ್ಕಾರಿ ಶಾಲೆಗಳನ್ನು ದುರ್ಬಲಗೊಳಿಸುವ ನಿರ್ಧಾರಗಳನ್ನು ಕೈಬಿಡಿ




**ವಿಜಯಸಾಕ್ಷಿ ಸುದ್ದಿ, ಗದಗ**

ಶಿಕ್ಷಣ ತಜ್ಞರು ಹಾಗೂ ಶಿಕ್ಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಸರ್ಕಾರ ಕೈಗೊಳ್ಳುತ್ತಿರುವ ಅವೈಜ್ಞಾನಿಕ ನಿರ್ಧಾರಗಳಿಂದ ಸರ್ಕಾರಿ ಶಾಲೆಗಳು ದಿನದಿಂದ ದಿನಕ್ಕೆ ದುರ್ಬಲವಾಗುತ್ತಿವೆ ಎಂದು ಅಖಿಲ ಭಾರತ ಪ್ರಾಥಮಿಕ ಶಿಕ್ಷಕರ ಫೆಡರೇಷನ್ ಅಧ್ಯಕ್ಷ ಬಸವರಾಜ ಗುರಿಕಾರ ಕಳವಳ ವ್ಯಕ್ತಪಡಿಸಿದರು.

ನಗರದ ಕನಕ ಭವನದಲ್ಲಿ ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘ, ಗದಗ ಜಿಲ್ಲಾ ಘಟಕ ಹಾಗೂ ಗದಗ ಗ್ರಾಮೀಣ ಶಿಕ್ಷಕರ ಸಂಘದ ಆಶ್ರಯದಲ್ಲಿ ನಡೆದ ಪ್ರತಿಭಾ ಪುರಸ್ಕಾರ, ನೂತನ ಪದಾಧಿಕಾರಿಗಳ ಪದಗ್ರಹಣ ಮತ್ತು ಧನ್ಯತಾ ಸಮರ್ಪಣಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಸರ್ಕಾರ ಜಾರಿಗೊಳಿಸಿರುವ ಕ್ಯಾಂಪ್ಸ್ ಹಾಗೂ ವೆಬ್‌ಕಾಸ್ಟ್ ಹಾಜರಾತಿ ವ್ಯವಸ್ಥೆ ಗುಣಾತ್ಮಕ ಶಿಕ್ಷಣಕ್ಕೆ ಯಾವುದೇ ನೆರವಾಗುವುದಿಲ್ಲ ಎಂದು ಟೀಕಿಸಿದ ಅವರು, ಶಾಲೆಗಳಲ್ಲಿ ವಿಷಯವಾರು ಶಿಕ್ಷಕರು, ಮುಖ್ಯ ಶಿಕ್ಷಕರು, ಕ್ಲರ್ಕ್ ಹಾಗೂ ಅಗತ್ಯ ಸಿಬ್ಬಂದಿಯ ಕೊರತೆ ಇರುವ ಸಂದರ್ಭದಲ್ಲಿ ಶಿಕ್ಷಕರ ಮೇಲೆ ಹೆಚ್ಚುವರಿ ಆಡಳಿತಾತ್ಮಕ ಹೊರೆ ಹಾಕುವುದು ಸರಿಯಲ್ಲ ಎಂದರು.

ಕ್ಯಾಂಪ್ಸ್ ವ್ಯವಸ್ಥೆಗೆ ಕೋಟ್ಯಂತರ ರೂಪಾಯಿ ಖರ್ಚು ಮಾಡುವ ಬದಲು ಆ ಹಣವನ್ನು ಸರ್ಕಾರಿ ಶಾಲೆಗಳಿಗೆ ನೀಡಿ ಕಂಪ್ಯೂಟರ್ ಆಪರೇಟರ್‌ಗಳನ್ನು ನೇಮಿಸಿದ್ದರೆ ಶಿಕ್ಷಣದ ಗುಣಮಟ್ಟ ಹೆಚ್ಚಾಗುತ್ತಿತ್ತು.

ಈ ವ್ಯವಸ್ಥೆ ಕಲಿಕೆಗೆ ಪೂರಕವಾಗದಿದ್ದರೆ ಸರ್ಕಾರ ಕೂಡಲೇ ಹಿಂಪಡೆಯಬೇಕು ಎಂದು ಒತ್ತಾಯಿಸಿದರು. ಸೇವಾನಿರತ ಶಿಕ್ಷಕರಿಗೆ ಟೀಚರ್ ಎಲಿಜಿಬಿಲಿಟಿ ಟೆಸ್ಟ್ (ಟಿಇಟಿ) ಕಡ್ಡಾಯಗೊಳಿಸಿರುವ ಎನ್‌ಸಿಟಿಇ ನಿಯಮವನ್ನು ಕೇಂದ್ರ ಸರ್ಕಾರ ತಿದ್ದುಪಡಿ ಮಾಡಿ ರದ್ದುಪಡಿಸಬೇಕು. ಇಲ್ಲವಾದರೆ ದೇಶದ ಸುಮಾರು 30 ಲಕ್ಷ ಶಿಕ್ಷಕರ ಉದ್ಯೋಗ ಭದ್ರತೆಗೆ ಧಕ್ಕೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದರು.

ಕರ್ನಾಟಕ ರಾಜ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಅಧ್ಯಕ್ಷ ವಿ.ಎಂ. ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿ, ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಗಲಿ ಅವರ ಪ್ರಯತ್ನದಿಂದ 1997ರಿಂದ ಇದ್ದ ಟಿಇಟಿ ಸಮಸ್ಯೆಗೆ ಕಾನೂನು ತಿದ್ದುಪಡಿ ಸಾಧ್ಯವಾಗಿ ಸುಮಾರು 10 ಸಾವಿರ ಶಿಕ್ಷಕರಿಗೆ ಬಡ್ತಿ ದೊರೆತಿದೆ ಎಂದು ಹೇಳಿದರು.

ಉಪನಿರ್ದೇಶಕ ಆರ್.ಎಸ್. ಬುರಡಿ ಅವರ ಅಧಿಕಾರಾವಧಿಯಲ್ಲಿ ಗದಗ ಜಿಲ್ಲೆಯಲ್ಲಿ ಸುಮಾರು 180 ಪ್ರಾಥಮಿಕ ಶಿಕ್ಷಕರಿಗೆ ಮುಖ್ಯ ಶಿಕ್ಷಕರಾಗಿ, 48 ಮಂದಿಗೆ ಹಾಗೂ 15 ದೈಹಿಕ ಶಿಕ್ಷಕರಿಗೆ ಬಡ್ತಿ ನೀಡಲಾಗಿದೆ. ರಾಜ್ಯದಲ್ಲಿಯೇ ಮೊದಲ ಬಾರಿಗೆ ದೈಹಿಕ ಶಿಕ್ಷಕರಿಗೆ ಬಡ್ತಿ ನೀಡಿದ ಜಿಲ್ಲೆ ಗದಗ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ ಎಂದು ಹೇಳಿದರು.

ರಾಜ್ಯ ಮಹಿಳಾ ಘಟಕದ ಸಹ ಕಾರ್ಯದರ್ಶಿ ಪ್ರಮೀಳಾ ಕಾಮನಹಳ್ಳಿ ಮಾತನಾಡಿ, ಕಳೆದ ಹತ್ತು ತಿಂಗಳಲ್ಲಿ ರಾಜ್ಯ ಸಂಘವು ಶಿಕ್ಷಕರ ಪರವಾಗಿ 27 ಮಹತ್ವದ ಆದೇಶಗಳನ್ನು ಹೊರಡಿಸಿದ್ದು, ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಕಲ್ಪಿಸಿರುವುದು ಸಂಘದ ಮಹತ್ವದ ಸಾಧನೆ ಎಂದರು.

ಕಾರ್ಯಕ್ರಮದಲ್ಲಿ ಸಂಘದ ರಾಜ್ಯಾಧ್ಯಕ್ಷ ಚಂದ್ರಶೇಖರ ನುಗ್ಗಲಿ, ಡಿಡಿಪಿಐ ಆರ್.ಎಸ್. ಬುರಡಿ, ಬಿಇಒ ವಿ.ವಿ. ನಡುವಿನಮನಿ, ಡಯಟ್ ಪ್ರಾಚಾರ್ಯ ಕೆ.ಡಿ. ಬಡಿಗೇರ, ಅಕ್ಷರ ದಾಸೋಹ ಅಧಿಕಾರಿ ಶಂಕರ ಹಡಗಲಿ, ತಾಲೂಕು ಅಧ್ಯಕ್ಷ ಶಿವಯೋಗಿ ಬಂಡಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಪದಾಧಿಕಾರಿಗಳು ಉಪಸ್ಥಿತರಿದ್ದರು. ಪ್ರತಿಭಾನ್ವಿತ ಶಿಕ್ಷಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಿ, ನೂತನ ಪದಾಧಿಕಾರಿಗಳಿಗೆ ಪದಗ್ರಹಣ ನೆರವೇರಿಸಲಾಯಿತು.

**ಶಿಕ್ಷಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳದೆ ಕೈಗೊಳ್ಳುವ ಅವೈಜ್ಞಾನಿಕ ನಿರ್ಧಾರಗಳಿಂದ ಸರ್ಕಾರಿ ಶಾಲೆಗಳು ದುರ್ಬಲವಾಗುತ್ತಿವೆ. ಕಲಿಕೆಗೆ ಪೂರಕವಾಗದ ಕ್ಯಾಂಪ್ಸ್ ವ್ಯವಸ್ಥೆಯನ್ನು ಸರ್ಕಾರ ಹಿಂಪಡೆಯಬೇಕು.**

– **ಬಸವರಾಜ ಗುರಿಕಾರ,** ಅಖಿಲ ಭಾರತ ಪ್ರಾಥಮಿಕ ಶಿಕ್ಷಕರ ಫೆಡರೇಷನ್ ಅಧ್ಯಕ್ಷರು

---

# ಮಾಜಿ ಸಚಿವ ಮುರುಗೇಶ್ ನಿರಾಣಿಗೆ ಸನ್ಮಾನ; ಗದಗ ಉತ್ಸವಕ್ಕೆ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾ ವಾಣಿಜ್ಯೋದ್ಯಮ ಸಂಸ್ಥೆಯ ಅಧ್ಯಕ್ಷ ಶರಣಬಸಪ್ಪ ಸಂಗಪ್ಪ ಗುಡಿಮನಿ ಅವರ ನೇತೃತ್ವದಲ್ಲಿ ಮಾಜಿ ಸಚಿವ ಮುರುಗೇಶ್ ನಿರಾಣಿ ಅವರನ್ನು ಭೇಟಿ ಮಾಡಿ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ವೇಳೆ ವಿಜಯ ಎಂ.ಆರ್.ಎನ್. ಸೌಹಾರ್ದ ಕ್ರೆಡಿಟ್ ಸಹಕಾರ ಸಂಘ ನಿಯಮಿತದ ಗದಗ 75ನೇ ಶಾಖೆ ಉದ್ಘಾಟನಾ ಸಮಾರಂಭದ ಹಿನ್ನೆಲೆಯಲ್ಲಿ ನಿರಾಣಿ ಅವರನ್ನು ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಆಗಸ್ಟ್ 14ರಿಂದ 18ರವರೆಗೆ ನಡೆಯಲಿರುವ ಟಿಗದಗ ಉತ್ಸವ2026ಟಿಕ್ಕೆ ಅಧಿಕೃತ ಆಹ್ವಾನ ನೀಡಲಾಯಿತು. ಈ ಸಂದರ್ಭದಲ್ಲಿ ಸಂಸ್ಥೆಯ ಮಾಜಿ ಅಧ್ಯಕ್ಷರಾದ ರಾಮನಗೌಡ್ರ ದಾನಪ್ಪಗೌಡ್ರ ಹಾಗೂ ತಾತನಗೌಡ್ರ ಪಾಟೀಲ, ಪದಾಧಿಕಾರಿಗಳಾದ ಜಯದೇವ ಮೆಣಸಗಿ, ಪ್ರಕಾಶ ಉಗಲಾಟದ, ಗೌರವ ಕಾರ್ಯದರ್ಶಿ ಚನ್ನವೀರಪ್ಪ ಹುಣಸಿಕಟ್ಟಿ ಹಾಗೂ ಗದಗ ಉತ್ಸವ2026ರ ಕಮಿಟಿಯ ಕೋ-ಚೇರ್ಮನ್ ಮಂಜುನಾಥ ವೀರಲಿಂಗಯ್ಯನಮಠ ಉಪಸ್ಥಿತರಿದ್ದರು.



---

### ಪುರಸಭೆ ಮುಂದೆ ಆಶ್ರಯ ನಿವಾಸಿಗಳ ಆಕ್ರೋಶ

# 30 ವರ್ಷ ಕಳೆದರೂ ಮೂಲಸೌಲಭ್ಯ ಇಲ್ಲ..!



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಸುಮಾರು 30 ವರ್ಷಗಳ ಹಿಂದೆ ನಿರ್ಮಾಣಗೊಂಡಿರುವ ಲಕ್ಷ್ಮೇಶ್ವರದ ಕರೆಗೋರಿ ಆಶ್ರಯ ಬಡಾವಣೆಯಲ್ಲಿ ರಸ್ತೆ, ಚರಂಡಿ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸುವಲ್ಲಿ ಪುರಸಭೆ ನಿರ್ಲಕ್ಷ್ಯ ವಹಿಸಿದೆ ಎಂದು ಆರೋಪಿಸಿ ನಿವಾಸಿಗಳು ಶನಿವಾರ ಪುರಸಭೆ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಪ್ರತಿಭಟನೆಯಲ್ಲಿ ಮಾತನಾಡಿದ ಮಂಜುನಾಥ ಅಂಗಡಿ ಹಾಗೂ ಆನಂದ ಅಮರಶೆಟ್ಟಿ, ಹಲವು ಬಾರಿ ಪುರಸಭೆ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಡಾವಣೆಯಲ್ಲಿ ಸಮರ್ಪಕ ಚರಂಡಿ ವ್ಯವಸ್ಥೆ ಇಲ್ಲದ ಕಾರಣ ಕೊಳಚೆ ನೀರು ರಸ್ತೆಯಲ್ಲೇ ನಿಂತು ದುರ್ವಾಸನೆ ಹರಡುತ್ತಿದೆ. ಇದರಿಂದ ಸಾಂಕ್ರಾಮಿಕ ರೋಗಗಳ ಭೀತಿ ಎದುರಾಗಿದ್ದು, ರಸ್ತೆ ಸಂಪೂರ್ಣ ಹದಗೆಟ್ಟಿರುವುದರಿಂದ ಮಳೆಗಾಲದಲ್ಲಿ ಸಂಚಾರ ದುಸ್ತರವಾಗಿದೆ. ಕೂಡಲೇ ಶಾಶ್ವತ ಪರಿಹಾರ ಕಲ್ಪಿಸಿ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದರು.

ಪ್ರತಿಭಟನೆ ವೇಳೆ ಪುರಸಭೆಯ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ಲ ಪ್ರತಿಕ್ರಿಯಿಸಿ, ಕರೆಗೋರಿ ಆಶ್ರಯ ಬಡಾವಣೆಯ ಸಮಗ್ರ ಅಭಿವೃದ್ಧಿಗೆ ₹48 ಲಕ್ಷ ವೆಚ್ಚದ ಕ್ರಿಯಾ ಯೋಜನೆ ಸಿದ್ಧಪಡಿಸಿ ಸರ್ಕಾರದ ಅನುಮೋದನೆಗೆ ಕಳುಹಿಸಲಾಗಿದೆ. ಅನುದಾನ ಬಿಡುಗಡೆಯಾದ ತಕ್ಷಣ ರಸ್ತೆ, ಚರಂಡಿ ಸೇರಿದಂತೆ ಅಗತ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು ಎಂದು ಭರವಸೆ ನೀಡಿದರು.

ನಿವಾಸಿಗಳ ಮನವಿ ಮೇರೆಗೆ ಹಿರಿಯ ಆರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್ಲ ಹಾಗೂ ಲಿಂಬಯ್ಯಸ್ವಾಮಿಮಠ ಸ್ಥಳಕ್ಕೆ ಭೇಟಿ ನೀಡಿ ಬಡಾವಣೆಯ ಪರಿಸ್ಥಿತಿಯನ್ನು ಪರಿಶೀಲಿಸಿದರು. ರಸ್ತೆಯಲ್ಲಿ ನಿಂತಿದ್ದ ಮಳೆ ಹಾಗೂ ಚರಂಡಿ ನೀರು ಸರಾಗವಾಗಿ ಹರಿದು ಹೋಗುವಂತೆ ಜೆಸ್ಸಿಬಿ ಯಂತ್ರದ ಮೂಲಕ ತಾತ್ಕಾಲಿಕ ವ್ಯವಸ್ಥೆ ಮಾಡುವುದಾಗಿ ತಿಳಿಸಿದರು.

ಪ್ರತಿಭಟನೆಯಲ್ಲಿ ಆನಂದ ಅಮರಶೆಟ್ಟಿ, ಮಂಜುನಾಥ ಅಂಗಡಿ, ಶಶಿಕಲಾ ಶೇಖಣ್ಣವರ, ಲಕ್ಷ್ಮಣ ನಾವಿ, ಮಲ್ಲಿಕಾರ್ಜುನ ಕರೆಯುತ್ತಿನ, ಮಂಜು ಸೋಗಿ, ಮಹೇಶ ಶಿರಹಟ್ಟಿ, ಗಂಗಾಧರ ಕರೆಯುತ್ತಿನ, ಬಸವರಾಜ ಅಕ್ಕಿ, ಬಸವರಾಜ ಹುಬ್ಬಳ್ಳಿ, ಗಣೇಶ ಉಮಚಗಿ, ಮಂಜುನಾಥ ಹುದ್ದಾರ, ಅಶೋಕ ಗೊರವರ, ಯಲ್ಲಪ್ಪ ಹಿಮ್ಮಡಿ, ಮಂಜುನಾಥ ದೊಡ್ಡಮನಿ, ಗುರುನಾಥ ಬೇಂದ್ರೆ, ಬಸವರಾಜ ಕನವಳ್ಳಿ, ರವಿ ಹುಬ್ಬಳ್ಳಿ, ವರುಣ ಸೊರಟೂರ, ಆನಂದ ಬೂದಿಹಾಳ ಸೇರಿದಂತೆ ಆಶ್ರಯ ಬಡಾವಣೆಯ ನಿವಾಸಿಗಳು ಪಾಲ್ಗೊಂಡಿದ್ದರು.

**ಮೂಲಸೌಲಭ್ಯಕ್ಕಾಗಿ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಪ್ರಯೋಜನವಾಗಿಲ್ಲ. ರಸ್ತೆ, ಚರಂಡಿ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು.**

– **ಪ್ರತಿಭಟನಾನಿರತ ಆಶ್ರಯ ಬಡಾವಣೆಯ ನಿವಾಸಿಗಳು**

---

### ಶಿಕ್ಷಣದ ಜತೆಗೆ ಜೀವನ ಮೌಲ್ಯ ಬೋಧಿಸಿದ ಎಸ್.ಎಚ್. ಶೆಟ್ಟಿನಾಯಕರಿಗೆ ಭಾವಪೂರ್ಣ ಗೌರವ

# ಅಕ್ಷರ ಬಿತ್ತಿದ ಗುರುಗೆ ಅಭಿಮಾನದ ವಿದಾಯ



**ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಮಕ್ಕಳ ಮನಸ್ಸನ್ನು ಅರ್ಥಮಾಡಿಕೊಂಡು ಪಠ್ಯದ ಜೊತೆಗೆ ಜೀವನ ಮೌಲ್ಯಗಳ ಶಿಕ್ಷಣ ನೀಡಿ ವಿದ್ಯಾರ್ಥಿಗಳ ಪ್ರೀತಿ ಗಳಿಸಿದ ಕನ್ನಡ ಶಿಕ್ಷಕ ಎಸ್.ಎಚ್. ಶೆಟ್ಟಿನಾಯಕರ ಅವರು ಈ ಶಾಲೆಯ ಆದರ್ಶ ಶಿಕ್ಷಕರಾಗಿದ್ದರು ಎಂದು ನಿವೃತ್ತ ಮುಖ್ಯೋಪಾಧ್ಯಾಯ ಸಿ.ಸಿ. ಕುರಹಟ್ಟಿ ಹೇಳಿದರು. ಲಕ್ಕುಂಡಿಯ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಆಯೋಜಿಸಿದ್ದ ಎಸ್.ಎಚ್. ಶೆಟ್ಟಿನಾಯಕರವರ ವಯೋನಿವೃತ್ತಿ ಬೀಳ್ಕೊಡುಗೆ ಸಮಾರಂಭದಲ್ಲಿ ಅವರು ಮಾತನಾಡಿ, ಮುಖ್ಯೋಪಾಧ್ಯಾಯರಿಗೆ ಹೆಗಲಾಗಿ, ಗ್ರಾಮಸ್ಥರಿಗೆ ಆತ್ಮೀಯ ಸ್ನೇಹಿತರಾಗಿ, ಶಾಲಾ ಆಡಳಿತಕ್ಕೆ ಸಲಹೆಗಾರರಾಗಿ ಹಾಗೂ ಮಕ್ಕಳಿಗೆ ತಂದೆ-ತಾಯಿಯಂತೆ ಸೇವೆ ಸಲ್ಲಿಸಿದ ಅವರ 14 ವರ್ಷಗಳ ಸೇವೆ ಶಾಲೆಯ ಇತಿಹಾಸದಲ್ಲಿ ಸ್ಮರಣೀಯವಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಾಹಿತಿ ಹಾಗೂ ನಿವೃತ್ತ ಉಪನ್ಯಾಸಕ ಎನ್.ಸಿ. ಮುಕ್ಕಣ್ಣವರ ಮಾತನಾಡಿ, ವಿದ್ಯಾರ್ಥಿಗಳ ಹೃದಯ ಗೆದ್ದ ಶಿಕ್ಷಕರಾಗಿ ಶೆಟ್ಟಿನಾಯಕರ ಸೇವೆ ಸಾರ್ಥಕವಾಗಿದೆ. ಶಾಲೆಯ ಅಭಿವೃದ್ಧಿ ಹಾಗೂ ಮೌಲ್ಯಾಧಾರಿತ ಶಿಕ್ಷಣಕ್ಕಾಗಿ ಅವರು ಸಲ್ಲಿಸಿದ ಕೊಡುಗೆ ಶ್ಲಾಘನೀಯ ಎಂದರು.

ನಿವೃತ್ತ ಯೋಧ ದತ್ತಾತ್ರೇಯ ಜೋಶಿ ಮಾತನಾಡಿ, ಶಿಕ್ಷಣ ಅತ್ಯಂತ ಪವಿತ್ರ ಕ್ಷೇತ್ರವಾಗಿದ್ದು, ಅದಕ್ಕೆ ಶೆಟ್ಟಿನಾಯಕರವರು ಹೊಸ ಶಕ್ತಿ ತುಂಬಿದ್ದಾರೆ ಎಂದು ಹೇಳಿದರು.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಕೆ.ಎಸ್. ಪೂಜಾರ ಮಾತನಾಡಿ, ಗುರು ಬ್ರಹ್ಮ, ಗುರು ವಿಷ್ಣು, ಗುರು ದೇವೋ ಮಹೇಶ್ವರ ಎಂಬ ಮಾತಿನಂತೆ ಶೆಟ್ಟಿನಾಯಕರವರು ತಮ್ಮ ಶಿಕ್ಷಕ ಸೇವೆಯ ಮೂಲಕ ಗುರುಗಳ ಮಹತ್ವವನ್ನು ಎತ್ತಿಹಿಡಿದಿದ್ದಾರೆ ಎಂದು ಹೇಳಿದರು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಎಸ್.ಎಚ್. ಶೆಟ್ಟಿನಾಯಕರ, ಗದಗ ತಾಲೂಕಿನ ಕೀರಿಟಗೇರಿಯಲ್ಲಿ ಆರಂಭವಾದ ತಮ್ಮ ಶಿಕ್ಷಕ ಜೀವನ ಲಕ್ಕುಂಡಿಯಲ್ಲಿ ಪೂರ್ಣಗೊಂಡಿದೆ. 39 ವರ್ಷಗಳ ಶಿಕ್ಷಕ ಸೇವೆ ಎಲ್ಲರ ಪ್ರೀತಿ, ವಿಶ್ವಾಸ ಹಾಗೂ ಸಹಕಾರದಿಂದ ಸಾರ್ಥಕವಾಗಿದೆ. ಕೀರಿಟಗೇರಿ ಹಾಗೂ ಲಕ್ಕುಂಡಿ ಗ್ರಾಮಸ್ಥರು ಶಾಲೆಯ ಅಭಿವೃದ್ಧಿಗೆ ನೀಡಿದ ಸಹಕಾರವನ್ನು ಜೀವನಪೂರ್ತಿ ಸ್ಮರಿಸುತ್ತೇನೆ ಎಂದು ಭಾವುಕರಾದರು. ಕಾರ್ಯಕ್ರಮದಲ್ಲಿ ಸಹ ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ತಮ್ಮ ಅನಿಸಿಕೆಗಳನ್ನು ಹಂಚಿಕೊಂಡರು.

ಮುಖ್ಯೋಪಾಧ್ಯಾಯಿನಿ ಜ್ಯೋತಿ ಶೆಟ್ಟರ ಅಧ್ಯಕ್ಷತೆ ವಹಿಸಿದ್ದರು. ವೀರಯ್ಯ ಗಂಧದ, ಎಸ್‌ಡಿಎಂಸಿ ಅಧ್ಯಕ್ಷ ರಮಜಾನಸಾಬ ತಹಶೀಲ್ದಾರ, ಅಶೋಕ ಬೂದಿಹಾಳ, ಮಲ್ಲಿಕಾರ್ಜುನ ಹಗರಿ, ಬಸವರಾಜ ಪುರದ, ಅಶೋಕ ಗದಗೀನ, ನಾಗಪ್ಪ ಕುಂಬಾರ, ಮಹಾಂತೇಶ ಕುಂಬಾರ, ಶ್ರೀಧರ ಮಲ್ಲಾಡದ, ಕೆ.ಎಂ. ವಡವಿ, ಟಿ.ಎಂ. ಶಿರಹಟ್ಟಿ, ಮಹೇಶಗೌಡ ಪಾಟೀಲ, ಶಿವಣ್ಣ ಕಟಕಟಿ, ವೀರೇಶ ಹಡಪದ, ಯಲ್ಲಪ್ಪಗೌಡ ಸಂಕನಗೌಡ, ಮಲ್ಲಪ್ಪ ದಂಡಿನ ಸೇರಿದಂತೆ ಶಿಕ್ಷಕರು, ಗ್ರಾಮಸ್ಥರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಶೋಭಾ ಪೂಜಾರ ಪ್ರಾರ್ಥಿಸಿದರು. ಕೀರ್ತಿ ಮ್ಯಾಗೇರಿ ಸ್ವಾಗತಿಸಿದರು. ವೈ.ವೈ. ಬೆಟಗೇರಿ ನಿರೂಪಿಸಿದರು. ಎಂ.ಎನ್. ಮುನಶಿ ವಂದಿಸಿದರು.

**ಪಠ್ಯದ ಜೊತೆಗೆ ಜೀವನ ಮೌಲ್ಯಗಳನ್ನು ಬೋಧಿಸಿ ವಿದ್ಯಾರ್ಥಿಗಳ ಮನ ಗೆದ್ದ ಶಿಕ್ಷಕ ಎಸ್.ಎಚ್. ಶೆಟ್ಟಿನಾಯಕರ ಸೇವೆ ಸದಾ ಸ್ಮರಣೀಯ.**

– **ಸಿ.ಸಿ. ಕುರಹಟ್ಟಿ,** ನಿವೃತ್ತ ಮುಖ್ಯೋಪಾಧ್ಯಾಯರು

---

### ಸಾವಿರಾರು ಸ್ಲಂ ನಿವಾಸಿಗಳನ್ನು ಸಂಘಟಿಸಿ ನಗರಸಭೆ ಮುತ್ತಿಗೆಗೆ ಸಿದ್ಧತೆ

# ಮೂಲ ಸೌಲಭ್ಯ ಕಲ್ಪಿಸದ ನಗರಸಭೆ ವಿರುದ್ಧ ಆಕ್ರೋಶ



**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ-ಬೆಟಗೇರಿ ನಗರದ ಸ್ಲಂ ಪ್ರದೇಶಗಳ ಅಭಿವೃದ್ಧಿ ಹಾಗೂ ವಸತಿರಹಿತರ ಸಮಸ್ಯೆಗಳ ಪರಿಹಾರಕ್ಕೆ ನಗರಸಭೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸುತ್ತಿದ್ದು, ಸ್ಲಂ ಜನರ ವಿರೋಧಿ ನೀತಿ ಅನುಸರಿಸುತ್ತಿದ್ದಾರೆ ಎಂದು ಆರೋಪಿಸಿರುವ ಗದಗ ಜಿಲ್ಲಾ ಸ್ಲಂ ಸಮಿತಿ, ಶೀಘ್ರದಲ್ಲೇ ನಗರಸಭೆ ಎದುರು ಬೃಹತ್ ಪ್ರತಿಭಟನೆ ನಡೆಸುವುದಾಗಿ ಎಚ್ಚರಿಕೆ ನೀಡಿದೆ.

ನಗರಸಭೆ ಉದ್ಯಾನವನದಲ್ಲಿ ನಡೆದ ಸ್ಲಂ ನಿವಾಸಿಗಳು ಹಾಗೂ ವಸತಿರಹಿತರ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಸಮಿತಿಯ ಅಧ್ಯಕ್ಷ ಇಮ್ತಿಯಾಜ್ ಆರ್. ಮಾನ್ವಿ, 2014ರಿಂದ ವಸತಿರಹಿತ ಕುಟುಂಬಗಳಿಗೆ ಮನೆ ಸೌಲಭ್ಯ ಕಲ್ಪಿಸುವಂತೆ ನಿರಂತರ ಹೋರಾಟ ನಡೆಸುತ್ತಿದ್ದೇವೆ. 348 ಕುಟುಂಬಗಳಿಗೆ ಮನೆ ಮಂಜೂರಾತಿ ಪತ್ರ ನೀಡಲಾಗಿದ್ದರೂ, ಮನೆ ಹಂಚಿಕೆ ವೇಳೆ ನೈಜ ಫಲಾನುಭವಿಗಳನ್ನು ಕೈಬಿಟ್ಟು ಪ್ರಭಾವಿಗಳ ಒತ್ತಡಕ್ಕೆ ಮಣಿದು ಅನರ್ಹರಿಗೆ ಮನೆಗಳನ್ನು ಹಂಚಿಕೆ ಮಾಡಲಾಗಿದೆ. ಇದಕ್ಕೆ ನಗರಸಭೆ ಪೌರಾಯುಕ್ತರು ಹಾಗೂ ಆಶ್ರಯ ಯೋಜನೆ ಸಿಬ್ಬಂದಿಯೇ ನೇರ ಹೊಣೆ ಎಂದು ಆರೋಪಿಸಿದರು.

ನಗರದ ಕೊಳಗೇರಿ ಪ್ರದೇಶಗಳನ್ನು ಅಧಿಕೃತವಾಗಿ ಘೋಷಿಸಲು ಅಗತ್ಯವಿರುವ ನಿರಾಕ್ಷೇಪಣಾ ಪತ್ರ ನೀಡುವಲ್ಲಿಯೂ ನಗರಸಭೆ ವಿಳಂಬ ನೀತಿ ಅನುಸರಿಸುತ್ತಿದೆ. ಅನೇಕ ಬಾರಿ ಮನವಿ ಸಲ್ಲಿಸಿದರೂ ಸ್ಲಂ ಪ್ರದೇಶಗಳ ಅಭಿವೃದ್ಧಿಗೆ ಅಧಿಕಾರಿಗಳು ಸ್ಪಂದಿಸುತ್ತಿಲ್ಲ. ನಗರಸಭೆ ಬಜೆಟ್‌ನಲ್ಲಿ ಸ್ಲಂ ಅಭಿವೃದ್ಧಿಗೆ ಪ್ರತ್ಯೇಕ ಅನುದಾನ ಮೀಸಲಿಡುವಂತೆ ಒತ್ತಾಯಿಸಿದ್ದರೂ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ದೂರಿದರು.

ಸ್ಲಂ ಪ್ರದೇಶಗಳ ಅನೇಕ ಮಹಿಳೆಯರಿಗೆ ಶೌಚಾಲಯ ಸೌಲಭ್ಯವಿಲ್ಲದ ಕಾರಣ ಇಂದಿಗೂ ಬಯಲು ಶೌಚವನ್ನು ಅವಲಂಬಿಸಬೇಕಾದ ಪರಿಸ್ಥಿತಿ ಇದೆ. ಈ ಗಂಭೀರ ಸಮಸ್ಯೆಯನ್ನು ಅಧಿಕಾರಿಗಳ ಗಮನಕ್ಕೆ ತಂದರೂ ಆರೋಗ್ಯ ಇಲಾಖೆ ಹಾಗೂ ನಗರಸಭೆ ಅಧಿಕಾರಿಗಳು ಕಣ್ಣಿದ್ದೂ ಕುರುಡರಂತೆ ವರ್ತಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸ್ಲಂ ನಿವಾಸಿಗಳು ಮತ್ತು ವಸತಿರಹಿತರ ನ್ಯಾಯಸಮ್ಮತ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ನಗರಸಭೆ ಎದುರು ಬೃಹತ್ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದ್ದು, ನಗರದ ಎಲ್ಲಾ ಸ್ಲಂ ನಿವಾಸಿಗಳು ಹಾಗೂ ವಸತಿರಹಿತರು ಸಾವಿರಾರು ಸಂಖ್ಯೆಯಲ್ಲಿ ಪಾಲ್ಗೊಂಡು ಹೋರಾಟ ಯಶಸ್ವಿಗೊಳಿಸಬೇಕು ಎಂದು ಇಮ್ತಿಯಾಜ್ ಮಾನ್ವಿ ಕರೆ ನೀಡಿದರು.

ಸಭೆಯಲ್ಲಿ ಸಂಘಟನೆಯ ಮುಖಂಡ ಎಂ.ಬಿ. ನದಾಫ್ (ವಕೀಲರು), ಮಹಿಳಾ ಸಮಿತಿ ಸಂಚಾಲಕಿ ಪರವೀನಬಾನು ಹವಾಲ್ದಾರ, ಇಬ್ರಾಹಿಂ ಮುಲ್ಲಾ, ಶರಣಪ್ಪ ಸೂಡಿ, ಮೌಲಾಸಾಬ ಗಚ್ಚಿ, ಮೆಹಬೂಬಸಾಬ ಬಳ್ಳಾರಿ, ಪುಷ್ಪಾ ಬಿಜಾಪೂರ, ಖಾಜಾಸಾಬ ಇಸ್ಮಾಯಿಲನವರ, ವಿಶಾಲಕ್ಷಿ ಹಿರೇಗೌಡ್ರ, ಲಕ್ಷ್ಮಿ ಮಳೆಕರ, ಮುನ್ನಾ ಅಗಡಿ, ನಜಮುನಿಸಾ ಮುರಗೋಡ, ಖಾಜಾಸಾಬ ಬಳ್ಳಾರಿ, ವೆಂಕಟೇಶ ಬಿಂಕದಕಟ್ಟಿ, ರವಿ ಗೋಸಾವಿ, ಮಕ್ತುಮಸಾಬ ಮುಲ್ಲಾನವರ, ಸಾಕ್ರುಬಾಯಿ ಗೋಸಾವಿ ಸೇರಿದಂತೆ ನಗರದ ವಿವಿಧ ಸ್ಲಂ ಪ್ರದೇಶಗಳ ಮುಖಂಡರು ಭಾಗವಹಿಸಿದ್ದರು.

**ಸ್ಲಂ ಜನರ ನ್ಯಾಯಸಮ್ಮತ ಬೇಡಿಕೆಗಳಿಗೆ ನಗರಸಭೆ ಸ್ಪಂದಿಸದಿದ್ದರೆ ಸಾವಿರಾರು ಸ್ಲಂ ನಿವಾಸಿಗಳೊಂದಿಗೆ ಬೃಹತ್ ಹೋರಾಟ ನಡೆಸಲಾಗುವುದು.**

– **ಇಮ್ತಿಯಾಜ್ ಆರ್. ಮಾನ್ವಿ,** ಅಧ್ಯಕ್ಷರು, ಗದಗ ಜಿಲ್ಲಾ ಸ್ಲಂ ಸಮಿತಿ

## ಸಂಕ್ಷಿಪ್ತ ಸುದ್ದಿಗಳು

### 36 ವರ್ಷಗಳ ಶಿಕ್ಷಣ ಸೇವೆ ಸಲ್ಲಿಸಿದ ಬಿ.ಜಿ. ಶಿರಸಿಗೆ ಹಳೆಯ ವಿದ್ಯಾರ್ಥಿಗಳಿಂದ ಆತ್ಮೀಯ ಸನ್ಮಾನ

# ಗುರುಮಾತೆಗೆ ಶಿಷ್ಯರ ಗೌರವದ ನಮನ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಸುಮಾರು 36 ವರ್ಷಗಳ ಕಾಲ ಶಿಕ್ಷಣ ಕ್ಷೇತ್ರದಲ್ಲಿ ಆದರ್ಶ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಶ್ರೀ ಬಸವೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿ ಬಿ.ಜಿ. ಶಿರಸಿ ಅವರಿಗೆ 198990ರಿಂದ 199596ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ಬಳಗದಿಂದ ಶಾಲೆಯ ಆವರಣದಲ್ಲಿ ಆತ್ಮೀಯ ಅಭಿನಂದನೆ ಹಾಗೂ ಸನ್ಮಾನ ಸಮಾರಂಭ ನಡೆಯಿತು.

ಸಮಾರಂಭದಲ್ಲಿ ಹಲವು ವರ್ಷಗಳ ಬಳಿಕ ಒಂದೆಡೆ ಸೇರಿದ ಹಳೆಯ ವಿದ್ಯಾರ್ಥಿಗಳು ತಮ್ಮ ಗುರುಮಾತೆಯೊಂದಿಗೆ ಶಾಲಾ ದಿನಗಳ ನೆನಪುಗಳನ್ನು ಮೆಲುಕು ಹಾಕಿ ಭಾವುಕರಾದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಮಿತಿಯ ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ ಮಾತನಾಡಿ, ಶಿಕ್ಷಕರಿಗೆ ನಿವೃತ್ತಿ ಇರಬಹುದು; ಆದರೆ ಅವರು ರೂಪಿಸಿದ ವಿದ್ಯಾರ್ಥಿಗಳ ಸಾಧನೆಗಳಲ್ಲಿ ಅವರ ಸೇವೆ ಸದಾ ಜೀವಂತವಾಗಿರುತ್ತದೆ. ಬಿ.ಜಿ. ಶಿರಸಿ ಅವರು ಶಿಕ್ಷಣದ ಜೊತೆಗೆ ಶಿಸ್ತು, ಸಮಯಪಾಲನೆ, ಮಾನವೀಯ ಮೌಲ್ಯಗಳು ಹಾಗೂ ಸಾಮಾಜಿಕ ಹೊಣೆಗಾರಿಕೆಯನ್ನು ವಿದ್ಯಾರ್ಥಿಗಳಲ್ಲಿ ಬೆಳೆಸಿದ ಆದರ್ಶ ಶಿಕ್ಷಕಿಯಾಗಿದ್ದಾರೆ ಎಂದು ಹೇಳಿದರು.

ಮುಖ್ಯ ಅತಿಥಿ ರವೀಂದ್ರನಾಥ ದೊಡ್ಡಮೇಟಿ ಮಾತನಾಡಿ, ವಿದ್ಯಾರ್ಥಿಗಳ ಪ್ರೀತಿ ಮತ್ತು ಗೌರವವೇ ಶಿಕ್ಷಕರ ಜೀವನದ ನಿಜವಾದ ಸಂಪತ್ತು. ಬಿ.ಜಿ. ಶಿರಸಿ ಅವರ ಮಾರ್ಗದರ್ಶನದಿಂದ ಶಿಕ್ಷಣ ಪಡೆದ ಅನೇಕ ವಿದ್ಯಾರ್ಥಿಗಳು ಇಂದು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವುದು ಅವರ ಸೇವೆಯ ದೊಡ್ಡ ಗೌರವವಾಗಿದೆ ಎಂದರು.

ಈ ವೇಳೆ ಹಳೆಯ ವಿದ್ಯಾರ್ಥಿಗಳ ಪರವಾಗಿ ಗುರುಮಾತೆಗೆ ಶಾಲು ಹೊದಿಸಿ, ಪುಷ್ಪಗುಚ್ಛ, ಸ್ಮರಣಿಕೆ, ಮೌಲ್ಯಯುತ ಪುಸ್ತಕ ಹಾಗೂ ಅಭಿನಂದನಾ ಪತ್ರ ನೀಡಿ ಗೌರವಿಸಲಾಯಿತು.

ಸನ್ಮಾನ ಸ್ವೀಕರಿಸಿ ಮಾತನಾಡಿದ ಬಿ.ಜಿ. ಶಿರಸಿ, ಶಿಕ್ಷಕರಿಗೆ ಸಿಗುವ ಅತಿ ದೊಡ್ಡ ಪ್ರಶಸ್ತಿ ವಿದ್ಯಾರ್ಥಿಗಳ ಪ್ರೀತಿ ಮತ್ತು ಗೌರವ. ಹಲವು ವರ್ಷಗಳ ನಂತರವೂ ನನ್ನನ್ನು ನೆನಪಿಸಿಕೊಂಡು ನೀಡಿದ ಈ ಸನ್ಮಾನ ನನ್ನ ಜೀವನದ ಅಮೂಲ್ಯ ಕ್ಷಣ ಎಂದು ಭಾವುಕರಾದರು.

ಶಿವಕುಮಾರ ಹಿರೇಮಠ ಸ್ವಾಗತಿಸಿದರು. ಸವಿತಾ ಪಾಟೀಲ ನಿರೂಪಿಸಿದರು. ಶ್ಯಾಮಸುಂದರ ಪ್ರಭಾಕರ ಅನಿಸಿಕೆ ಹಂಚಿಕೊಂಡರು. ವೀರಭದ್ರಪ್ಪ ಮೆಣಸಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ನಂದೀಶ ಎಸ್. ಅಚ್ಚಿ ಅಭಿನಂದನಾ ಪತ್ರ ವಾಚಿಸಿದರು. ಪ್ರಶಾಂತ ಹಲಕುರ್ಕಿ ವಂದಿಸಿದರು.

ಶಾಲೆಯ ಶಿಕ್ಷಕರು, ಸಿಬ್ಬಂದಿ, ಹಳೆಯ ವಿದ್ಯಾರ್ಥಿಗಳು, ಪಾಲಕರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಗುರುಮಾತೆಯ ಶಿಕ್ಷಣ ಸೇವೆಯನ್ನು ಕೊಂಡಾಡಿದರು.

### ಮಹಾಂತ ಸ್ವಾಮಿಗಳ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವಂತೆ ವಿದ್ಯಾರ್ಥಿಗಳಿಗೆ ಕರೆ

# ವ್ಯಸನ ಬಿಟ್ಟು ಆರೋಗ್ಯದ ಬದುಕು ಕಟ್ಟಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ವ್ಯಸನಗಳು ವ್ಯಕ್ತಿಯ ಆರೋಗ್ಯ, ಕುಟುಂಬದ ನೆಮ್ಮದಿ ಹಾಗೂ ಸಮಾಜದ ಸುಸ್ಥಿತಿಗೆ ಮಾರಕವಾಗಿದ್ದು, ಪ್ರತಿಯೊಬ್ಬರೂ ದುಶ್ಚಟಗಳನ್ನು ತ್ಯಜಿಸಿ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಜಕ್ಕಲಿಯ ಎಚ್.ಪಿ.ಕೆ.ಜಿ.ಎಸ್. ಶಾಲೆಯ ಮುಖ್ಯ ಶಿಕ್ಷಕ ಎಸ್.ಬಿ. ಗವಿ ಹೇಳಿದರು.

ಕರ್ನಾಟಕ ಸರ್ಕಾರದ ನಿರ್ದೇಶನದಂತೆ ವ್ಯಸನ ಮುಕ್ತ ದಿನಾಚರಣೆ ಅಂಗವಾಗಿ ಜಕ್ಕಲಿಯ ಸರ್ಕಾರಿ ಹಿರಿಯ ಪ್ರಾಥಮಿಕ ಕನ್ನಡ ಗಂಡು ಶಾಲೆ ಹಾಗೂ ಎಚ್.ಪಿ.ಕೆ.ಜಿ.ಎಸ್. ಶಾಲೆಯಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಇಲಕಲ್ಲದ ಲಿಂ. ಮಹಾಂತ ಸ್ವಾಮಿಗಳ ಜಯಂತಿಯ ಅಂಗವಾಗಿ ಆಚರಿಸಲಾಗುವ ವ್ಯಸನ ಮುಕ್ತ ದಿನವು ಸಮಾಜದಲ್ಲಿ ಜಾಗೃತಿ ಮೂಡಿಸುವ ಮಹತ್ವದ ಕಾರ್ಯಕ್ರಮವಾಗಿದೆ. ಮಹಾಂತ ಸ್ವಾಮಿಗಳು ಟಿಮಹಾಂತ ಜೋಳಿಗೆಟಿ ಮೂಲಕ ಮನೆ ಮನೆಗೆ ತೆರಳಿ ಮದ್ಯಪಾನ, ತಂಬಾಕು ಸೇರಿದಂತೆ ದುಶ್ಚಟಗಳ ವಿರುದ್ಧ ಜಾಗೃತಿ ಮೂಡಿಸಿ ಆರೋಗ್ಯ, ಶಾಂತಿ, ಸದಾಚಾರ ಮತ್ತು ಮಾನವೀಯ ಮೌಲ್ಯಗಳ ಸಂದೇಶ ಸಾರಿದ್ದರು ಎಂದು ಹೇಳಿದರು.

ಯುವಜನತೆ ವ್ಯಸನಗಳಿಂದ ದೂರವಿದ್ದು ಉತ್ತಮ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡರೆ ಆರೋಗ್ಯವಂತ ಹಾಗೂ ಸದೃಢ ಸಮಾಜ ನಿರ್ಮಾಣ ಸಾಧ್ಯ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಯಾವುದೇ ವ್ಯಸನಕ್ಕೆ ಒಳಗಾಗುವುದಿಲ್ಲ. ನನ್ನ ಕುಟುಂಬ ಹಾಗೂ ಸಮಾಜವನ್ನು ವ್ಯಸನಮುಕ್ತವಾಗಿಡಲು ಶ್ರಮಿಸುತ್ತೇನೆ ಎಂಬ ಪ್ರತಿಜ್ಞೆ ಸ್ವೀಕರಿಸಿದರು.

ಹೆಚ್.ಎಸ್. ಬಿಂಗಿ ಹಾಗೂ ಎಂ.ವಿ. ತಾಳಿಕೋಟಿ ವಿದ್ಯಾರ್ಥಿಗಳಿಗೆ ವ್ಯಸನಮುಕ್ತ ಪ್ರತಿಜ್ಞಾವಿಧಿ ಬೋಧಿಸಿದರು.

ಕಾರ್ಯಕ್ರಮದಲ್ಲಿ ಎಸ್.ಎ. ಪಲ್ಲೇದ, ಪ್ರೇಮ ಹುಯಿಲಗೋಳ, ಎಸ್. ಎಸ್. ಯಲ್ಲರೆಡ್ಡಿ, ಎ.ಪಿ. ಶೆಟ್ಟರ್, ಸಿ.ಎಸ್. ಬೆಳ್ಳಟ್ಟಿ, ಸಿ.ಎಸ್. ಗೋಡೆಸವಾರ, ಅರುಣ್ ಸೂರ್ಯಭಟ್ಟನವರ್ ಸೇರಿದಂತೆ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

**ವ್ಯಸನಗಳನ್ನು ತ್ಯಜಿಸಿದಾಗ ಮಾತ್ರ ಆರೋಗ್ಯವಂತ ವ್ಯಕ್ತಿ, ಸದೃಢ ಕುಟುಂಬ ಮತ್ತು ಉತ್ತಮ ಸಮಾಜ ನಿರ್ಮಾಣ ಸಾಧ್ಯ.**
**- ಎಸ್.ಬಿ. ಗವಿ, ಮುಖ್ಯ ಶಿಕ್ಷಕರು**

### ಇಬ್ಬರು ಪೇದೆಗಳ ಅಮಾನತು, ಸಿಸಿಟಿವಿ ಸೇರಿ ಎಲ್ಲ ಸಾಕ್ಷ್ಯಗಳ ಪರಿಶೀಲನೆ

# ಠಾಣೆಯಲ್ಲೇ ಯುವಕ ಸಾವು!? ಖಾಕಿಗೆ ಕಂಟಕ

**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಹಗರಿಬೊಮ್ಮನಹಳ್ಳಿ ಪೊಲೀಸ್ ಠಾಣೆಯಲ್ಲಿ ಪೊಲೀಸ್ ವಶದಲ್ಲಿದ್ದ ಯುವಕ ಮೃತಪಟ್ಟಿರುವ ಘಟನೆ ತೀವ್ರ ಸಂಚಲನಕ್ಕೆ ಕಾರಣವಾಗಿದ್ದು, ಪ್ರಕರಣಕ್ಕೆ ಸಂಬಂಧಿಸಿದಂತೆ ಇಬ್ಬರು ಪೊಲೀಸ್ ಪೇದೆಗಳನ್ನು ಅಮಾನತುಗೊಳಿಸಿ ಎಫ್ಐಆರ್ ದಾಖಲಿಸಲಾಗಿದೆ.

ಪಟ್ಟಣದ ಮೆಹಬೂಬನಗರ ನಿವಾಸಿ ಖಲೀಲುಲ್ಲಾ (38) ಎಂಬಾತ ಶನಿವಾರ ರಾತ್ರಿ ಕುಟುಂಬ ಕಲಹದ ಹಿನ್ನೆಲೆಯಲ್ಲಿ ಪತ್ನಿ 112 (ಉಖಖ)ಗೆ ನೀಡಿದ ದೂರಿನ ಮೇರೆಗೆ ಪೊಲೀಸರು ಠಾಣೆಗೆ ಕರೆತಂದಿದ್ದರು. ಈ ವೇಳೆ ಪೊಲೀಸರು ದೈಹಿಕ ಹಲ್ಲೆ ನಡೆಸಿದ ಪರಿಣಾಮ ಖಲೀಲುಲ್ಲಾ ಮೃತಪಟ್ಟಿದ್ದಾರೆ ಎಂದು ಮೃತನ ಪತ್ನಿ ಆರೋಪಿಸಿದ್ದಾರೆ.

ಠಾಣೆಯಲ್ಲಿ ಅಸ್ವಸ್ಥಗೊಂಡ ಖಲೀಲುಲ್ಲಾ ಅವರನ್ನು ಪೊಲೀಸರು ಮುಂಜಾನೆ ಸುಮಾರು 3 ಗಂಟೆ ವೇಳೆಗೆ ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ದರೂ, ಅಷ್ಟರಲ್ಲೇ ಅವರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಬಳಿಕ ಮರಣೋತ್ತರ ಪರೀಕ್ಷೆಗಾಗಿ ಮೃತದೇಹವನ್ನು ಕೊಪ್ಪಳ ಜಿಲ್ಲಾ ಆಸ್ಪತ್ರೆಗೆ ರವಾನಿಸಲಾಯಿತು.



ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ವಿಜಯನಗರ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾನ್ಹವಿ ಅವರು ಠಾಣೆಯ ಮುಖ್ಯ ಪೇದೆ ರಾಘವೇಂದ್ರ, ಹಾಗೂ ಪೇದೆ ವೆಂಕಟೇಶ್ ವಿರುದ್ಧ ಪ್ರಕರಣ ದಾಖಲಿಸಿ, ಇಬ್ಬರನ್ನೂ ಅಮಾನತುಗೊಳಿಸಿದ್ದಾರೆ.

ಪ್ರಕರಣದ ತನಿಖೆಯನ್ನು ಡಿಎಸ್ಪಿಗೆ ವಹಿಸಲಾಗಿದ್ದು, ಠಾಣೆಯ ಸಿಸಿಟಿವಿ ದೃಶ್ಯಾವಳಿ ಸೇರಿದಂತೆ ಎಲ್ಲ ಸಾಕ್ಷ್ಯಾಧಾರಗಳನ್ನು ತಜ್ಞರ ತಂಡದಿಂದ ಪರಿಶೀಲಿಸಲಾಗುತ್ತಿದೆ.

ಘಟನೆ ತಿಳಿಯುತ್ತಿದ್ದಂತೆ ಶಾಸಕ ಕೆ. ನೇಮಿರಾಜ ನಾಯ್ಕ ಆಸ್ಪತ್ರೆಗೆ ಹಾಗೂ ಠಾಣೆಗೆ ಭೇಟಿ ನೀಡಿ ಮೃತನ ಕುಟುಂಬಕ್ಕೆ ಸಾಂತ್ವನ ಹೇಳಿದರು. ಹರಪನಹಳ್ಳಿ ಅಂಜುಮನ್ ಸಮಿತಿಯ ನೂರ್ ಮಹಮ್ಮದ್ ಸೇರಿದಂತೆ ಅಲ್ಪಸಂಖ್ಯಾತ ಸಮುದಾಯದ ಮುಖಂಡರು ಕೂಡ ಕುಟುಂಬಕ್ಕೆ ಧೈರ್ಯ ತುಂಬಿದರು.

ಇನ್ನೊಂದೆಡೆ, ಬಳ್ಳಾರಿ ವಲಯ ಐಜಿಪಿ ಡಾ. ಹರ್ಷ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಪಟ್ಟಣದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಕೆಎಸ್ಆರ್ಪಿ, ಡಿಎಆರ್ ಸೇರಿದಂತೆ ವಿವಿಧ ಠಾಣೆಗಳ ಸುಮಾರು 150ಕ್ಕೂ ಹೆಚ್ಚು ಪೊಲೀಸ್ ಸಿಬ್ಬಂದಿಯನ್ನು ಬಂದೋಬಸ್ತ್‌ಗೆ ನಿಯೋಜಿಸಲಾಗಿದೆ. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾನ್ಹವಿ ಅವರು ಭಾನುವಾರ ಹಾಗೂ ಸೋಮವಾರವೂ ಠಾಣೆಯಲ್ಲೇ ಮೊಕ್ಕಾಂ ಹೂಡಿ ಪರಿಸ್ಥಿತಿಯ

**ಘಟನೆಗೆ ಸಂಬಂಧಿಸಿದಂತೆ ಮುಖ್ಯ ಪೇದೆ ರಾಘವೇಂದ್ರ, ಹಾಗೂ ಪೇದೆ ವೆಂಕಟೇಶ್ ವಿರುದ್ಧ ಎಫ್ಐಆರ್ ದಾಖಲಿಸಿ ಅಮಾನತುಗೊಳಿಸಲಾಗಿದೆ. ಡಿಎಸ್ಪಿ ನೇತೃತ್ವದಲ್ಲಿ ಸಮಗ್ರ ತನಿಖೆ ನಡೆಯುತ್ತಿದ್ದು, ಸಿಸಿಟಿವಿ ದೃಶ್ಯಾವಳಿ ಸೇರಿದಂತೆ ಎಲ್ಲ ಸಾಕ್ಷ್ಯಾಧಾರಗಳನ್ನು ಪರಿಶೀಲಿಸಿ ವರದಿ ಆಧರಿಸಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುವುದು.**
**- ಎಸ್. ಜಾನ್ಹವಿ,** ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ, ವಿಜಯನಗರ



**ಗದಗ: ಗದಗ ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾ ಕಚೇರಿಗೆ ಆಗಮಿಸಿದ್ದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರನ್ನು ಸಮಾಜ ಸೇವಕಿ ಶ್ವೇತಾ ಅಂಗಡಿ ಅವರು ಪುಷ್ಪಗುಚ್ಛ ನೀಡಿ ಆತ್ಮೀಯವಾಗಿ ಸ್ವಾಗತಿಸಿದರು.**

### ಗದಗ ಮೀಡಿಯಾ ಕ್ರಿಕೆಟ್ ಲೀಗ್‌ಗೆ ಭರ್ಜರಿ ಮುನ್ನುಡಿ;

# ಅಭ್ಯಾಸ ಪಂದ್ಯದಲ್ಲೇ ರೂರಲ್ ಕಿಂಗ್ಸ್ ದರ್ಬಾರ್



**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ (ಕಾನಿಪ) ವತಿಯಿಂದ ಪತ್ರಿಕಾ ದಿನಾಚರಣೆ ಅಂಗವಾಗಿ ಆಗಸ್ಟ್ 20ರಿಂದ ನಡೆಯಲಿರುವ ಜಿಲ್ಲಾ ಮಟ್ಟದ ಗದಗ ಮೀಡಿಯಾ ಕ್ರಿಕೆಟ್ ಲೀಗ್ಗೆ ಭಾನುವಾರ ನಡೆದ ಅಭ್ಯಾಸ ಪಂದ್ಯಗಳು ಭರ್ಜರಿ ಮುನ್ನುಡಿ ಬರೆದವು. ನಾಲ್ಕು ತಂಡಗಳ ನಡುವೆ ನಡೆದ ರೋಚಕ ಹಣಾಹಣಿಯಲ್ಲಿ ಜಗದೀಶ್ ಎಸ್.ಪಿ ಮಾಲಿಕತ್ವದ ರೂರಲ್ ಕಿಂಗ್ಸ್ ತಂಡ ಚಾಂಪಿಯನ್ ಆಗಿ ಹೊರಹೊಮ್ಮಿತು.

ರೂರಲ್ ಕಿಂಗ್ಸ್, ಆರ್‌ಸಿಬಿ, ನೈಟ್ ರೈಡರ್ಸ್ ಹಾಗೂ ವಿನ್ನರ್ಸ್ ತಂಡಗಳು ಅಭ್ಯಾಸ ಪಂದ್ಯಗಳಲ್ಲಿ ಸೆಣಸಿದವು. ಮೊದಲ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ನೈಟ್ ರೈಡರ್ಸ್ ತಂಡ 10 ಓವರ್‌ಗಳಲ್ಲಿ 66 ರನ್ ಗಳಿಸಿತು.

ಗುರಿ ಬೆನ್ನಟ್ಟಿದ ರೂರಲ್ ಕಿಂಗ್ಸ್ ಯಾವುದೇ ವಿಕೆಟ್ ಕಳೆದುಕೊಳ್ಳದೆ ಕೇವಲ ಏಳು ಓವರ್‌ಗಳಲ್ಲಿ ಗುರಿ ತಲುಪಿ 10 ವಿಕೆಟ್‌ಗಳ ಭರ್ಜರಿ ಜಯ ದಾಖಲಿಸಿತು.

ಎರಡನೇ ಪಂದ್ಯದಲ್ಲಿ ವಿನ್ನರ್ಸ್ ತಂಡ ಆರ್‌ಸಿಬಿಯನ್ನು ಸೋಲಿಸಿ ಫೈನಲ್ ಪ್ರವೇಶಿಸಿತು. ಅಂತಿಮ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ ವಿನ್ನರ್ಸ್ 10 ಓವರ್‌ಗಳಲ್ಲಿ 73 ರನ್ ಗಳಿಸಿತು. ಪ್ರತಿಯಾಗಿ ಬ್ಯಾಟಿಂಗ್ ಮಾಡಿದ ರೂರಲ್ ಕಿಂಗ್ಸ್ ತಂಡ ನಿರಾಯಾಸವಾಗಿ ಗುರಿ ಬೆನ್ನಟ್ಟಿ ಪ್ರಶಸ್ತಿ ತನ್ನದಾಗಿಸಿಕೊಂಡಿತು.

ತಂಡದ ಬೌಲರ್‌ಗಳು ಹಾಗೂ ಬ್ಯಾಟರ್‌ಗಳ ಸಂಘಟಿತ ಪ್ರದರ್ಶನ ಗೆಲುವಿನಲ್ಲಿ ಪ್ರಮುಖ ಪಾತ್ರ ವಹಿಸಿತು.

ಪಂದ್ಯಾವಳಿಯಲ್ಲಿ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ವಸಂತ ಮಡ್ಲೂರ, ಕಾನಿಪ ಜಿಲ್ಲಾಧ್ಯಕ್ಷ ರಾಜು ಹೆಬ್ಬಳ್ಳಿ, ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ, ಹಿರಿಯ ಪತ್ರಕರ್ತರಾದ ಅನಂತ ಕಾರ್ಕಳ, ಅನಿಲ ತೆಂಬದಮನಿ, ಸುನಿಲ್ ತೆಂಬದಮನಿ, ಅಜಿತ್ ಹೊಂಬಾಳಿ, ಆನಂದ ಸಾಲಿಗ್ರಾಮ, ಟಿ.ಎನ್. ಭಾಂಡಗೆ, ಆನಂದಯ್ಯ ವೀರಕ್ತಮಠ ಸೇರಿದಂತೆ ಜಿಲ್ಲೆಯ ಪತ್ರಕರ್ತರು, ಸಂಪಾದಕರು ಮತ್ತು ಛಾಯಾಗ್ರಾಹಕರು ಉಪಸ್ಥಿತರಿದ್ದರು.

**ನಮ್ಮ ತಂಡದ ಎಲ್ಲ ಆಟಗಾರರು ಅತ್ಯುತ್ತಮ ಪ್ರದರ್ಶನ ನೀಡಿದ್ದಾರೆ. ಕ್ರೀಡಾಸ್ಫೂರ್ತಿಯಿಂದ ನಡೆದ ಈ ಅಭ್ಯಾಸ ಪಂದ್ಯಗಳು ಅಧಿಕೃತ ಟೂರ್ನಿಗೆ ಉತ್ತಮ ಆತ್ಮವಿಶ್ವಾಸ ತುಂಬಿವೆ.**
**- ಜಗದೀಶ್ ಎಸ್.ಪಿ,** ಮಾಲಿಕರು, ರೂರಲ್ ಕಿಂಗ್ಸ್

**ಅಭ್ಯಾಸ ಪಂದ್ಯಗಳು ಆಟಗಾರರಿಗೆ ಉತ್ತಮ ಪೂರ್ವತಯಾರಿಯಾಗಿವೆ. ಫೈನಲ್‌ನಲ್ಲಿ ಗೆದ್ದ ರೂರಲ್ ಕಿಂಗ್ಸ್ ತಂಡಕ್ಕೆ ಅಭಿನಂದನೆಗಳು.**
**- ಎಚ್.ಎಂ. ಶರೀಫನವರ,** ಮಾಲಿಕರು, ನೈಟ್ ರೈಡರ್ಸ್

### ಪಿಎಂ ಕಿಸಾನ್ ಮುಂದುವರಿಕೆ; ಡಿ.ವೈ. ಹುನಗುಂದ ಶ್ಲಾಘನೆ


# ರೈತರ ವಿಶ್ವಾಸಕ್ಕೆ ಮತ್ತೆ ಮೋದಿ ಮುದ್ರೆ

**ವಿಜಯಸಾಕ್ಷಿ ಸುದ್ದಿ, ಗದಗ**

202627ರಿಂದ 203031ರವರೆಗೆ ಮುಂದಿನ ಐದು ವರ್ಷಗಳ ಕಾಲ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ (ಕಖ-ಓಋಖಅಫ) ಯೋಜನೆ ಮುಂದುವರಿಸಲು ಕೇಂದ್ರ ಸರ್ಕಾರ ₹3.15 ಲಕ್ಷ ಕೋಟಿಗೂ ಅಧಿಕ ಅನುದಾನ ಮೀಸಲಿಟ್ಟಿರುವುದು ರೈತಪರ ಆಡಳಿತಕ್ಕೆ ಮತ್ತೊಂದು ಸಾಕ್ಷಿಯಾಗಿದೆ ಎಂದು ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಡಿ.ವೈ. ಹುನಗುಂದ ತಿಳಿಸಿದ್ದಾರೆ.

ಪತ್ರಿಕಾ ಪ್ರಕಟಣೆ ನೀಡಿರುವ ಅವರು, 2019ರಲ್ಲಿ ಆರಂಭವಾದ ಪಿಎಂ ಕಿಸಾನ್ ಯೋಜನೆಯು ಇಂದು ವಿಶ್ವದ ಅತಿದೊಡ್ಡ ನೇರ ನಗದು ವರ್ಗಾವಣೆ (ಡಿಬಿಟಿ) ಯೋಜನೆಗಳಲ್ಲಿ ಒಂದಾಗಿ ಬೆಳೆದಿದೆ. ಆಧಾರ್ ದೃಢೀಕರಣ, ಫೇಸ್ ಆಥೆಂಟಿಕೇಶನ್ ಹಾಗೂ ಡಿಜಿಟಲ್ ತಂತ್ರಜ್ಞಾನದ ಮೂಲಕ ಯಾವುದೇ ಮಧ್ಯವರ್ತಿಗಳಿಲ್ಲದೆ ನೆರವು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ತಲುಪುತ್ತಿರುವುದು ಯೋಜನೆಯ ದೊಡ್ಡ ಯಶಸ್ಸಾಗಿದೆ ಎಂದರು.

ಕೇಂದ್ರ ಸರ್ಕಾರ ಕಳೆದ ಹತ್ತು ವರ್ಷಗಳಲ್ಲಿ



ಕೃಷಿ ಬಜೆಟ್ ಅನ್ನು ₹21,933 ಕೋಟಿಯಿಂದ ₹1,27,290 ಕೋಟಿಗೂ ಅಧಿಕ ಮೊತ್ತಕ್ಕೆ ಏರಿಕೆ ಮಾಡಿರುವುದು ರೈತರ ಅಭಿವೃದ್ಧಿಗೆ ನೀಡುತ್ತಿರುವ ಆದ್ಯತೆಯನ್ನು ತೋರಿಸುತ್ತದೆ. ರೈತರಿಗೆ ಪ್ರಾದೇಶಿಕ ಭಾಷೆಯಲ್ಲಿ ಕೃಷಿ ಮಾಹಿತಿ ತಲುಪಿಸಲು ಟಿಭಾರತ್ ವಿಸ್ತಾರಟಿ ಹಾಗೂ ಟಿಭಾಷಿಣಿಟಿ ಎಐ ತಂತ್ರಜ್ಞಾನ ಜಾರಿಗೊಳಿಸುತ್ತಿರುವುದೂ ರೈತ ಸಬಲೀಕರಣದ ಮಹತ್ವದ ಹೆಜ್ಜೆಯಾಗಿದೆ ಎಂದು ಹೇಳಿದರು.

ಯೋಜನೆಯಡಿ ಅರ್ಹ ರೈತ ಕುಟುಂಬಗಳಿಗೆ ವರ್ಷಕ್ಕೆ ₹6,000 ಅನ್ನು ಮೂರು ಕಂತುಗಳಲ್ಲಿ ನೇರವಾಗಿ ಜಮೆ ಮಾಡಲಾಗುತ್ತಿದೆ. ಇದುವರೆಗೆ 23 ಕಂತುಗಳ ಮೂಲಕ ₹4.47 ಲಕ್ಷ ಕೋಟಿಗೂ ಅಧಿಕ ಮೊತ್ತ ರೈತರ ಖಾತೆಗೆ ವರ್ಗಾವಣೆಯಾಗಿದ್ದು, ಇತ್ತೀಚಿನ ಕಂತಿನಲ್ಲಿ 9.49 ಕೋಟಿಗೂ ಅಧಿಕ ರೈತರಿಗೆ ₹18,984 ಕೋಟಿಗೂ ಹೆಚ್ಚು ಹಣ ಜಮೆಯಾಗಿದೆ ಎಂದು ಮಾಹಿತಿ ನೀಡಿದರು.

ನೀತಿ ಆಯೋಗದ ವರದಿ ಪ್ರಕಾರ, ಶೇ.92ಕ್ಕೂ ಹೆಚ್ಚು ರೈತರು ಈ ನೆರವನ್ನು ಕೃಷಿ ಹೂಡಿಕೆಗೆ ಬಳಸಿದ್ದು, ಶೇ.85ರಷ್ಟು ರೈತರ ಆದಾಯ ಹೆಚ್ಚಳವಾಗಿದೆ. ಜೊತೆಗೆ ಕಿಸಾನ್ ಕ್ರೆಡಿಟ್ ಕಾರ್ಡ್ (ಕೆಸಿಸಿ) ಹಾಗೂ ಪಿಎಂ ಕಿಸಾನ್ ಮಾನ್-ಧನ್ ಯೋಜನೆಯಂತಹ ಕಾರ್ಯಕ್ರಮಗಳ ಮೂಲಕ ರೈತರಿಗೆ ಇನ್ನಷ್ಟು ಭದ್ರತೆ ಒದಗಿಸಲಾಗುತ್ತಿದೆ ಎಂದು ತಿಳಿಸಿದರು.

ಕೇಂದ್ರ ಸರ್ಕಾರದ ಈ ರೈತಪರ ನಿರ್ಧಾರವನ್ನು ಜಿಲ್ಲೆಯ ಸಮಸ್ತ ರೈತ ಸಮುದಾಯದ ಪರವಾಗಿ ಸ್ವಾಗತಿಸಿ ಅಭಿನಂದಿಸುತ್ತೇನೆ ಎಂದು ಡಿ.ವೈ. ಹುನಗುಂದ ತಿಳಿಸಿದ್ದಾರೆ.

**ಮುಂದಿನ ಐದು ವರ್ಷಗಳಿಗೂ ಪಿಎಂ ಕಿಸಾನ್ ಯೋಜನೆ ಮುಂದುವರಿಸಿರುವುದು ರೈತರ ಕಲ್ಯಾಣಕ್ಕೆ ಪ್ರಧಾನಿ ನರೇಂದ್ರ ಮೋದಿ ಸರ್ಕಾರದ ಅಚಲ ಬದ್ಧತೆಯ ಪ್ರತೀಕ.**
**- ಡಿ.ವೈ. ಹುನಗುಂದ,** ಜಿಲ್ಲಾಧ್ಯಕ್ಷರು, ಬಿಜೆಪಿ ರೈತ ಮೋರ್ಚಾ

### ಒಂದು ತಿಂಗಳಿಂದ ಸಿಸಿಟಿವಿ ಬಂದ್; ನಿಷ್ಪಕ್ಷಪಾತ ತನಿಖೆಗೆ ರವಿಕಾಂತ ಅಂಗಡಿ ಆಗ್ರಹ

# ವಿದ್ಯಾರ್ಥಿನಿ ವೀಣಾ ಹಾನಾಪೂರ ಪ್ರಕರಣಕ್ಕೆ ಹೊಸ ತಿರುವು?



**ವಿಜಯಸಾಕ್ಷಿ ಸುದ್ದಿ, ಗದಗ**

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ವಿಶ್ವವಿದ್ಯಾಲಯದ ವಿದ್ಯಾರ್ಥಿನಿ ಡಾ. ವೀಣಾ ಹಾನಾಪೂರ ಅವರ ಸಂಶಯಾಸ್ಪದ ಸಾವಿನ ಪ್ರಕರಣದಲ್ಲಿ ಹೊಸ ಅನುಮಾನಗಳು ಮೂಡಿದ್ದು, ವಿದ್ಯಾರ್ಥಿನಿಯರ ವಸತಿ ನಿಲಯದಲ್ಲಿನ ಸಿಸಿಟಿವಿ ಕ್ಯಾಮೆರಾಗಳು ಕಳೆದ ಒಂದು ತಿಂಗಳಿಂದ ಕಾರ್ಯನಿರ್ವಹಿಸದಿರುವುದು ಪ್ರಕರಣಕ್ಕೆ ಹೊಸ ತಿರುವು ನೀಡಿದೆ.

ಶನಿವಾರ ಜಿಲ್ಲಾಧಿಕಾರಿ ಕಚೇರಿಯಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರನ್ನು ಮೃತ ವಿದ್ಯಾರ್ಥಿನಿಯ ಪಾಲಕರೊಂದಿಗೆ ಭೇಟಿ ಮಾಡಿದ ಉತ್ತರ ಕರ್ನಾಟಕ ಮಹಾಸಭಾ ರಾಜ್ಯಾಧ್ಯಕ್ಷ ಹಾಗೂ ಹಿರಿಯ ವಕೀಲ ರವಿಕಾಂತ ಅಂಗಡಿ, ಪ್ರಕರಣದ ನಿಷ್ಪಕ್ಷಪಾತ ತನಿಖೆಗೆ ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಅವರು, ವಿದ್ಯಾರ್ಥಿನಿಯರ ಸುರಕ್ಷತೆಯ ಹೊಣೆ ಹೊತ್ತಿರುವ ವಿಶ್ವವಿದ್ಯಾಲಯದಲ್ಲಿ ಒಂದು ತಿಂಗಳಿಂದ ಸಿಸಿಟಿವಿ ವ್ಯವಸ್ಥೆ ಸ್ಥಗಿತಗೊಂಡಿರುವುದು ಗಂಭೀರ ಆಡಳಿತಾತ್ಮಕ ವೈಫಲ್ಯವಾಗಿದೆ. ಇಂತಹ ಪ್ರಕರಣದಲ್ಲಿ ಸತ್ಯವನ್ನು ಮುಚ್ಚಿಹಾಕುವ ಯಾವುದೇ ಪ್ರಯತ್ನವನ್ನು ಉತ್ತರ ಕರ್ನಾಟಕ ಮಹಾಸಭಾ ಸಹಿಸುವುದಿಲ್ಲ ಎಂದು ಎಚ್ಚರಿಸಿದರು.

ವಿದ್ಯಾರ್ಥಿನಿಯ ಸಾವಿನಂತಹ ಗಂಭೀರ ಘಟನೆ ನಡೆದಿದ್ದರೂ ವಿಶ್ವವಿದ್ಯಾಲಯದ ಉನ್ನತ ಅಧಿಕಾರಿಗಳ ಸ್ಪಂದನೆ ತೃಪ್ತಿಕರವಾಗಿಲ್ಲ. ಪ್ರಕರಣದಲ್ಲಿ ಯಾರನ್ನಾದರೂ ರಕ್ಷಿಸುವ ಅಥವಾ ಸಾಕ್ಷ್ಯಗಳನ್ನು ದುರ್ಬಲಗೊಳಿಸುವ ಪ್ರಯತ್ನ ನಡೆದರೆ ತೀವ್ರ ಹೋರಾಟ ನಡೆಸಲಾಗುವುದು ಎಂದು ಹೇಳಿದರು.

ಪ್ರಕರಣವನ್ನು ಸಿಬಿಐ ಅಥವಾ ಸ್ವತಂತ್ರ ತನಿಖಾ ಸಂಸ್ಥೆಗೆ ವಹಿಸಿ, ಡಿಜಿಟಲ್ ಸಾಕ್ಷ್ಯಗಳು, ಮೊಬೈಲ್ ಕರೆ ವಿವರಗಳು, ಸಿಸಿಟಿವಿ ತಾಂತ್ರಿಕ ದಾಖಲೆಗಳು, ವಸತಿ ನಿಲಯದ ಹಾಜರಾತಿ ದಾಖಲೆಗಳು ಹಾಗೂ ಸಂಬಂಧಪಟ್ಟ ಅಧಿಕಾರಿಗಳ ಪಾತ್ರವನ್ನು ಸಮಗ್ರವಾಗಿ ತನಿಖೆ ನಡೆಸಬೇಕು ಎಂದು ಅವರು ಒತ್ತಾಯಿಸಿದರು.

ಇದಕ್ಕೆ ಪ್ರತಿಕ್ರಿಯಿಸಿದ ಡಾ. ನಾಗಲಕ್ಷ್ಮಿ ಚೌಧರಿ, ಸಿಸಿಟಿವಿ ವ್ಯವಸ್ಥೆ ಕಾರ್ಯನಿರ್ವಹಿಸದಿರುವುದು ಮೇಲ್ನೋಟಕ್ಕೆ ಗಂಭೀರ ಆಡಳಿತಾತ್ಮಕ ಲೋಪವಾಗಿದ್ದು, ಈ ಕುರಿತು ಪ್ರತ್ಯೇಕ ತನಿಖೆ ನಡೆಸಲಾಗುವುದು ಎಂದು ಭರವಸೆ ನೀಡಿದರು. ಅಲ್ಲದೆ, ಗೃಹ ಸಚಿವರನ್ನು ಭೇಟಿ ಮಾಡಿ ಯಾವುದೇ ಪ್ರಭಾವಕ್ಕೆ ಅವಕಾಶ ನೀಡದೆ ನಿಷ್ಪಕ್ಷಪಾತ ತನಿಖೆ ನಡೆಸುವಂತೆ ಮನವಿ ಮಾಡುವುದಾಗಿ ತಿಳಿಸಿದರು.

ಕುಲಪತಿ, ರಿಜಿಸ್ಟ್ರಾರ್, ವಸತಿ ನಿಲಯದ ವಾರ್ಡನ್ ಸೇರಿದಂತೆ ಕರ್ತವ್ಯಲೋಪ ಎಸಗಿರುವುದು ಸಾಬೀತಾದ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಜರುಗಿಸಬೇಕು. ಡಾ. ವೀಣಾ ಹಾನಾಪೂರ ಅವರ ಕುಟುಂಬಕ್ಕೆ ನ್ಯಾಯ ದೊರೆಯುವವರೆಗೆ ಹೋರಾಟ ಮುಂದುವರಿಯಲಿದೆ ಎಂದು ರವಿಕಾಂತ ಅಂಗಡಿ

**ಒಂದು ತಿಂಗಳಿಂದ ಸಿಸಿಟಿವಿ ಕಾರ್ಯನಿರ್ವಹಿಸದಿರುವುದು ಸಾಮಾನ್ಯ ಲೋಪವಲ್ಲ, ವೀಣಾ ಹಾನಾಪೂರ ಪ್ರಕರಣದ ಸತ್ಯ ಹೊರಬರಲು ನಿಷ್ಪಕ್ಷಪಾತ ತನಿಖೆಯೇ ಏಕೈಕ ಮಾರ್ಗ.**
**- ರವಿಕಾಂತ ಅಂಗಡಿ,** ರಾಜ್ಯಾಧ್ಯಕ್ಷರು, ಉತ್ತರ ಕರ್ನಾಟಕ ಮಹಾಸಭಾ

# ಜನ್ಮದಿನವನ್ನು ಸಮಾಜಸೇವೆಗೆ ಮೀಸಲಿಟ್ಟ ಕಪ್ಪತ್ತಗಿರಿ ಫೌಂಡೇಶನ್

**ವಿಜಯಸಾಕ್ಷಿ ಸುದ್ದಿ, ಗದಗ**

ಜನ್ಮದಿನವನ್ನು ಕೇವಲ ಸಂಭ್ರಮಕ್ಕೆ ಸೀಮಿತಗೊಳಿಸದೆ ಸಮಾಜಸೇವೆಯ ಮೂಲಕ ಅರ್ಥಪೂರ್ಣವಾಗಿ ಆಚರಿಸಬೇಕು ಎಂಬ ಸಂದೇಶದೊಂದಿಗೆ ಕಪ್ಪತ್ತಗಿರಿ ಫೌಂಡೇಶನ್ ಸಂಸ್ಥಾಪಕ ಅಧ್ಯಕ್ಷೆ ಚಂದ್ರಕಲಾ ಇಟಗಿಮಠ ಅವರು ತಮ್ಮ ಹಾಗೂ ಪುತ್ರನ ಜನ್ಮದಿನದ ಅಂಗವಾಗಿ ಎರಡು ದಿನಗಳ ಕಾಲ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಆಯೋಜಿಸಿದರು.

ಜುಲೈ 31ರಂದು ಬೆಳದಡಿ ತಾಂಡಾದ ಬ್ರಹ್ಮಾನಂದಪುರ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಸುಮಾರು 160 ವಿದ್ಯಾರ್ಥಿಗಳಿಗೆ ಉಚಿತ ಆರೋಗ್ಯ ತಪಾಸಣೆ ನಡೆಸಿ, ಆರೋಗ್ಯ, ಸ್ವಚ್ಛತೆ, ಪೌಷ್ಟಿಕ ಆಹಾರ ಹಾಗೂ ಆರೋಗ್ಯಕರ ಜೀವನಶೈಲಿ ಕುರಿತು ಜಾಗೃತಿ ಮೂಡಿಸಲಾಯಿತು.

ಇದೇ ಸಂದರ್ಭದಲ್ಲಿ ಮಲ್ಲಸಮುದ್ರದ ಆನಂದ ವೃದ್ಧಾಶ್ರಮಕ್ಕೆ ಭೇಟಿ ನೀಡಿ ವೃದ್ಧರೊಂದಿಗೆ ಆತ್ಮೀಯವಾಗಿ ಸಮಯ ಕಳೆದರು. ಆಗಸ್ಟ್ 1ರಂದು ಬೆಟಗೇರಿಯ ಮಂಜು ಶಿಕ್ಷಣ ಸಂಸ್ಥೆಯಲ್ಲಿ ವಿಶೇಷ ಚೇತನ ಮಕ್ಕಳೊಂದಿಗೆ ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸಿ, ಅವರಿಗೆ ಆತ್ಮವಿಶ್ವಾಸ ತುಂಬುವ ಕಾರ್ಯ ನಡೆಸಲಾಯಿತು.

ಆರೋಗ್ಯ ತಪಾಸಣೆಯನ್ನು ಡಾ. ದೀಪಾ ಮೂರಶಿಳ್ಳಿನ ಹಾಗೂ ಡಾ. ಕಲ್ಲೇಶ್ ಮೂರಶಿಳ್ಳಿನ ನಡೆಸಿ, ಮಕ್ಕಳಿಗೆ ಆರೋಗ್ಯದ ಕುರಿತು ಮಾರ್ಗದರ್ಶನ ನೀಡಿದರು. ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಎ.ಎಸ್. ಮಕಾನದಾರ, ಆನಂದ ವೃದ್ಧಾಶ್ರಮದ ಸಂಸ್ಥಾಪಕ ಗಂಗಾಧರ, ತೋಟಯ್ಯ ಗುಡ್ಡಿಮಠ, ಎಸ್‌ಡಿಎಂಸಿ ಅಧ್ಯಕ್ಷರು, ಶಿಕ್ಷಕರು, ಗ್ರಾಮಸ್ಥರು ಹಾಗೂ ಕಪ್ಪತ್ತಗಿರಿ ಫೌಂಡೇಶನ್ ಸದಸ್ಯರು ಭಾಗವಹಿಸಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka